ಸಂಪುಟ 01 | ಸಂಚಿಕೆ 100 | ಬುಧವಾರ 25 ಫೆಬ್ರವರಿ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**ಅವತಾರ್ ಮೆಹರ್ ಬಾಬಾ ಜಯಂತಿ**

ಅವತಾರ್ ಮೆಹರ್ ಬಾಬಾ ಜಯಂತಿಯನ್ನು ಪ್ರತಿವರ್ಷ ಫೆಬ್ರವರಿ 25ರಂದು ಆಚರಿಸಲಾಗುತ್ತದೆ. ಈ ದಿನವು ಅವರ ಜನ್ಮದಿನದ ಸ್ಮರಣಾರ್ಥವಾಗಿದ್ದು, ಅವರು 1894ರ ಫೆಬ್ರವರಿ 25ರಂದು ಮರ್ವಾನ್ ಶೆರಿಯಾರ್ ಇರಾನೀ ಎಂಬ ಹೆಸರಿನಲ್ಲಿ ಜನಿಸಿದರು. ಭಕ್ತರು ಅವರನ್ನು "ಈ ಯುಗದ ಅವತಾರ್" ಎಂದು ಪೂಜಿಸುತ್ತಾರೆ. ಈ ಪವಿತ್ರ ದಿನದಂದು ವಿಶ್ವದಾದ್ಯಂತ ಅವರ ಅನುಯಾಯಿಗಳು ಪ್ರಾರ್ಥನೆಗಳು, ಭಜನೆಗಳು ಮತ್ತು ಆಧ್ಯಾತ್ಮಿಕ ಸಭೆಗಳ ಮೂಲಕ ಜಯಂತಿಯನ್ನು ಭಕ್ತಿಭಾವದಿಂದ ಆಚರಿಸುತ್ತಾರೆ. ವಿಶೇಷವಾಗಿ ಮಹಾರಾಷ್ಟ್ರದ Meherabaಜನಲ್ಲಿ ಇರುವ ಅವರ ಸಮಾಧಿಯಲ್ಲಿ ಭಕ್ತರ ದೊಡ್ಡ ಸಮಾಗಮ ನಡೆಯುತ್ತದೆ.

## ಸುಭಾಷಿತ

ನೂರಾರು ಯುದ್ಧಗಳನ್ನು ಗೆಲ್ಲುವುದಕ್ಕಿಂತ ಮೊದಲು ನಿನ್ನನ್ನು ನೀನು ಗೆಲ್ಲು. ಅದೇ ನಿನ್ನ ವಿಜಯ. ಅದನ್ನು ಯಾರಿಂದಲೂ ಕಸಿದುಕೊಳ್ಳಲು ಆಗದು.

ಗೌತಮ ಬುದ್ಧ

# ಅಗ್ನಿಶಾಮಕ ಇಲಾಖೆಯಲ್ಲಿ 1600 ಹುದ್ದೆಗಳ ನೇಮಕಾತಿಗೆ ಕ್ರಮ :ಪರಮೇಶ್ವರ್

**ಬೆಂಗಳೂರು: ಅಗ್ನಿಶಾಮಕ ಮತ್ತು ತುರ್ತುಸೇವೆಗಳ ಇಲಾಖೆಯಲ್ಲಿ 1600ಕ್ಕೂ ಹೆಚ್ಚು ವಿವಿಧ ಹುದ್ದೆಗಳ ನೇಮಕಾತಿಗೆ ಕ್ರಮ ಕೈಗೊಳ್ಳುವುದಾಗಿ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ.**

ಬನ್ನೇರುಘಟ್ಟ ರಸ್ತೆಯ ಆರ್.ಎ.ಮುಂಡ್ಕೂರ್ ಅಗ್ನಿಶಾಮಕ ತರಬೇತಿ ಅಕಾಡೆಮಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತುಸೇವಾ ಇಲಾಖೆ, ಗೃಹರಕ್ಷಕ ದಳ, ಪೌರರಕ್ಷಣೆ ಮತ್ತು ಎಸ್‌ಡಿಆರ್‌ಎಫ್ ಅಧಿಕಾರಿ, ಸಿಬ್ಬಂದಿಗಳಿಗೆ ಮುಖ್ಯಮಂತ್ರಿಗಳ ಪದಕ ಪ್ರದಾನ ಹಾಗೂ 40 ಹೊಸ ಅಗ್ನಿಶಾಮಕ ಜಲ ವಾಹನಗಳನ್ನು ಹಸ್ತಾಂತರಿಸಿ ಅವರು ಮಾತನಾಡಿದರು.

ಸಾಂಸ್ಕೃತಿಕ ಕಾರ್ಯಕ್ರಮಗಳು 15 ಹೊಸ ತಾಲ್ಲೂಕುಗಳಲ್ಲಿ ಅಗ್ನಿಶಾಮಕ ಠಾಣೆಗಳನ್ನುಸ್ಥಾಪಿಸಲು ಮುಖ್ಯಮಂತ್ರಿಯವರನ್ನು ಕೋರಿದ್ದೇನೆ. ಪೊಲೀಸ್ ಗೃಹ ಯೋಜನೆಯಡಿ 40 ಸಾವಿರ ಮನೆ ಕಟ್ಟಿದ್ದೇವೆ.

ಅದೇ ಮಾದರಿಯಲ್ಲಿ ಅಗ್ನಿಶಾಮಕ ಸಿಬ್ಬಂದಿಗಳಿಗೆ ವಸತಿ ಗೃಹ ಕಲ್ಪಿಸುವ ತೀರ್ಮಾನ ಮಾಡಲಾಗಿದೆ. ಇದಕ್ಕೆ ಹಣ ಒದಗಿಸಲಾಗುವುದು ಎಂದು ಅವರು ಹೇಳಿದರು. ಖಾಲಿ ಇರುವ ಹುದ್ದೆಗಳ ಭರ್ತಿಗೆ



ಅನುಮತಿಗೆ ಮುಖ್ಯಮಂತ್ರಿಯವರಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. 1600 ಹುದ್ದೆಗಳನ್ನು ಭರ್ತಿ ಮಾಡಲಾಗುವುದು ಎಂದು ಭರವಸೆ ನೀಡಿದರು. ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತುಸೇವೆಗಳ ಇಲಾಖೆಯು ಉತ್ತಮ ಸೇವೆ ಮೂಲಕ ರಾಷ್ಟ್ರ ಮಟ್ಟದಲ್ಲಿ ಜನಮನ್ನಣೆ ಪಡೆದು, ರಾಜ್ಯಕ್ಕೆ ಗೌರವ ಸಂಪಾದನೆ ಮಾಡಿರುವುದನ್ನು ರಾಜ್ಯ ಸರ್ಕಾರ ಮತ್ತು ಜನಸಮುದಾಯ ಗಮನಿಸಿದೆ ಎಂದು ಹೇಳಿದರು.

ಅಗ್ನಿಶಾಮಕ ಮತ್ತು ತುರ್ತುಸೇವಾ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳು ಶಿಸ್ತಿನ ಸಿಪಾಯಿಗಳು. ಪೊಲೀಸ್ ಇಲಾಖೆಯ ಜೊತೆಯಾಗಿ ಅಷ್ಟೇ ಶಿಸ್ತನ್ನು ಕಾಪಾಡಿಕೊಂಡು ಬಂದಿದ್ದೀರಿ. ವಿಪತ್ತಿನ ಸಂದರ್ಭದಲ್ಲಿ ಸ್ವಯಂ ಸ್ಫೂರ್ತಿಯಿಂದ ಕೆಲಸ ಮಾಡಲು ಶ್ರಮಿಸಲಾಗಿದೆ. ಇದನ್ನು ಸಮಾಜ ಗುರುತಿಸಿದೆ. ಇಡೀ ದೇಶದಲ್ಲಿ ಕರ್ನಾಟಕ ಅಗ್ನಿಶಾಮಕ ಮತ್ತು ಇತರೆ ಇಲಾಖೆಗಳು ಮಾದರಿಯಾಗಿದೆ ಎಂದರು. ಪ್ರತಿದಿನ ಹಲವು ದುರಂತಗಳನ್ನು ನೋಡುತ್ತೇವೆ. ನಗರ ಪ್ರದೇಶಗಳಲ್ಲಿ ಹೆಚ್ಚಿನ ಅವಘಡಗಳು ಸಂಭವಿಸುತ್ತವೆ. ತುರ್ತು ಸಂದರ್ಭದಲ್ಲಿ ಪ್ರಾಣವನ್ನು ಒತ್ತೆ ಇಟ್ಟು, ಸಾರ್ವಜನಿಕರ ಆಸ್ತಿ ಮತ್ತು ನಾಗರಿಕರ ಪ್ರಾಣ ರಕ್ಷಣೆ ಮಾಡುವ ಕೆಲಸ ಮಾಡಿದ್ದೀರಿ.

ಪ್ರವಾಹಗಳು ಉಂಟಾದ ಸಂದರ್ಭದಲ್ಲಿ ಜೀವದ ಹಂಗು ತೊರೆದು ಜನರನ್ನು ಕಾಪಾಡಿರುವುದನ್ನು ನೆನೆಯುತ್ತೇನೆ. ಮಡಿಕೇರಿಯಲ್ಲಿ ಸಂಭವಿಸಿದ ಪ್ರವಾಹದ ವೇಳೆ ಒಂಟಿ ಮನೆಗಳಲ್ಲಿದ್ದ ಜನರನ್ನು ರಕ್ಷಣೆ ಮಾಡಲು ತೆಗೆದುಕೊಂಡ ನಿರ್ಧಾರ ಮತ್ತು ಪ್ರಯತ್ನಗಳು ಅತ್ಯಂತ ಶ್ಲಾಘನೀಯ ಎಂದರು. ನಿಮ ಕೆಲಸ ಸುಲಭ ಎಂದು ಹೇಳಲಾಗುವುದಿಲ್ಲ. ದೇಶದ ದಕ್ಷಿಣ ಭಾಗದ ರಾಜ್ಯಗಳಲ್ಲಿ ಕರ್ನಾಟಕ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ ಅತ್ಯಂತ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಪ್ರಶಂಸಿದರು. ಬೆಂಗಳೂರಿನಲ್ಲಿ ಬಹುಮಹಡಿ ಕಟ್ಟಡಗಳು ಹೆಚ್ಚಾಗುತ್ತಿವೆ. ಅಗ್ನಿ ಅವಘಡಗಳು ಸಂಭವಿಸಿದ ಸಂದರ್ಭದಲ್ಲಿ ನಿಯಂತ್ರಿಸಲು ಆಧುನಿಕ ಮತ್ತು ಸುಸಜ್ಜಿತ ಸಲಕರಣೆ, ವಾಹನಗಳನ್ನು ಒದಗಿಸಲಾಗಿದೆ.

ಪ್ರಥಮ ಬಾರಿಗೆ 90 ಮೀಟರ್ ಎತ್ತರ ತಲುಪಬಲ್ಲ ಏರಿಯಲ್ ಲ್ಯಾಡರ್ ಪ್ಲಾಟ್‌ಫಾರ್ಮ್ ವಾಹನ ಮಾದರಿ ಅಗ್ನಿಶಾಮಕ ವಾಹನವಾಗಿದೆ. 15ನೇ ಹಣಕಾಸಿನ ಯೋಜನೆಯಡಿ 329 ಕೋಟಿ ರೂ. ಒದಗಿಸಲಾಗಿತ್ತು. 21 ಅಗ್ನಿಶಾಮಕ ಠಾಣೆ ನಿರ್ಮಿಸಲು 98 ಕೋಟಿ ರೂ. ಖರ್ಚು ಮಾಡಲಾಗಿದೆ.

## ಹಾಲಾಪೂರ: ಇಂದು ಶ್ರೀ ಬಸವೇಶ್ವರ ಜಾತ್ರೆ ಹಾಗೂ ಸಿಡಿದೆದ್ದ ಶಿವ ಶಕ್ತಿ ನಾಟಕ ಪ್ರದರ್ಶನ

ನೈಜ್ಯ ದೆಸೆ ನ್ಯೂಸ್

ಮಸ್ಕಿ: ತಾಲೂಕಿನ ಹಾಲಾಪೂರ ಗ್ರಾಮದಲ್ಲಿ ಇಂದು ಶ್ರೀ ಬಸವೇಶ್ವರ ಜಾತ್ರೆ ಜರುಗುತ್ತದೆ ಎಂದು ದೇವಸ್ಥಾನದ ಅರ್ಚಕರಾದ ಶ್ರೀ ಚೆನ್ನಯ್ಯ ತಾತನವರು ಪತ್ರಿಕೆಗೆ ತಿಳಿಸಿದರು. ಬೆಳಗ್ಗೆ ರುದ್ರಾಭಿಷೇಕ, ಪೂಜೆ, ಹೂವಿನ ಅಲಂಕಾರ, ಸರ್ವ ಭಕ್ತಾದಿಗಳಿಗೆ ಮಹಾಪ್ರಸಾದ ವ್ಯವಸ್ಥೆ ಹಾಗೂ ಸಂಜೆ ಡೊಳ್ಳು, ಭಜನೆ, ಕಳಸದೊಂದಿಗೆ ಗಂಗಸ್ಥಳಕ್ಕೆ ಪೂಜೆ ನೆರವೇರಿಸಿ ನಂತರ ಉಚ್ಚಯ ಕಾರ್ಯಕ್ರಮ ಬಹು ವಿಜೃಂಭಣೆಯಿಂದ ನಡೆಯುತ್ತದೆ ಎಂದು ಅರ್ಚಕರಾದ ಶ್ರೀ ಚೆನ್ನಯ್ಯ ತಾತ ತಿಳಿಸಿದರು.



ರಾತ್ರಿ 10 ಗಂಟೆಗೆ ಶ್ರೀ ಗುರು ಕರಿಯಪ್ಪ ತಾತ ನವ ತರುಣ ನಾಟ್ಯ ಸಂಘ ಇವರು, ಗೌಡ್ರು ಗದ್ಲ ಖ್ಯಾತಿಯ ದಿವಂಗತ ರಾಮರಾವ್ ದೇಸಾಯಿ ಮಿತ್ರ ಮಂಡಳಿ ಅರ್ಪಿಸುವ, ಡಿ ಆರ್ ಪೂಜಾರ ವಿರಚಿತ "ಸಿಡಿದೆದ್ದ ಶಿವ ಶಕ್ತಿ" ಎಂಬ ಸುಂದರ ಸಾಮಾಜಿಕ ನಾಟಕ ಪ್ರದರ್ಶನನಡೆಯುವುದು.

## ಆಹಾರವನ್ನು ಸಂಪೂರ್ಣವಾಗಿ ಸೇವಿಸುವ ಮೂಲಕ ಪೌಷ್ಟಿಕಾಂಶಗಳ ಕೊರತೆ ನೀಗಿಸಲು ಪ್ರತಿಯೊಬ್ಬರು ಕೈಜೊಡಿಸೋಣ.



ನೈಜ್ಯ ದೆಸೆ ನ್ಯೂಸ್

**ರಾಯಚೂರು: ಪೌಷ್ಟಿಕ ಆಹಾರ ಸೇವನೆಯಿಂದ ದೇಹದಬೆಳವಣಿಗೆಮಾತ್ರವಲ್ಲದೆರೋಗನಿರೋಧಕ ಶಕ್ತಿಯ ವರ್ಧನೆಯಿಂದ ರೋಗರುಜಿನಗಳು ದೂರವಾಗುವವು, ಈ ದಿಶೆಯಲ್ಲಿ ಪಾಲಕರು ಸಹ ಮನೆಯ ಆಹಾರ ಪದ್ದತಿಯಲ್ಲಿ ಎಲ್ಲ ಬಗೆಯ ತರಕಾರಿ, ಹಸಿರು ತಪ್ಪಲುಗಳು, ಮುಂತಾದವುಗಳ ಬಳಕೆಗೆ ಮಹತ್ವ ನೀಡಬೇಕು ಜಿಲ್ಲಾ ಐಇಸಿ ತಂಡದ ಮೂಲಕ ಆರೋಗ್ಯ ಶಿಕ್ಷಣವನ್ನು ಶಾಲಾ ಮಕ್ಕಳಿಗೆ ನೀಡಲಾಯಿತು.**

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ರಾಗಮಾನಗಡ್ಡಾ ಇವರ ಆಶ್ರಯದಲ್ಲಿ ನಗರದ ಅಭಿಜ್ಞಾನ ಪ್ರೌಢಶಾಲೆಯಲ್ಲಿ ಹಮ್ಮಿಕೊಂಡ ಆರೋಗ್ಯ ಶಿಕ್ಷಣ ಕಾರ್ಯಕ್ರಮದಲ್ಲಿ ಜಿಲ್ಲಾ ಅರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ ಮಾತನಾಡಿ, ಪೌಷ್ಟಿಕ ಆಹಾರ ಸೇವನೆಯಿಂದ ರಕ್ತಹೀನತೆ ಹೋಗಲಾಡಿಸಲು ಸಹಕಾರಿ, ಇದಕ್ಕಾಗಿ, ಬಾಲ್ಯದಲ್ಲಿಯೇ ಕಾಲಕಾಲಕ್ಕೆ ಚುಚ್ಚುಮದ್ದುಗಳು, ಕಬ್ಬಿಣಾಂಶ ಮಾತ್ರೆಗಳ ಸೇವನೆ, ಪ್ರತಿ ಆರು ತಿಂಗಳಿಗೊಮ್ಮೆ ಜಂತುಹುಳ ನಿವಾರಕ ಮಾತ್ರೆ ಸೇವನೆಗೆ ಒತ್ತು ನೀಡಲು, ವೈಯಕ್ತಿಕ ಶುಚಿತ್ವಕ್ಕಾಗಿ ಊಟದ ಮೊದಲು ಶೌಚದ ನಂತರ ಸಾಬೂನು ಮತ್ತು ನೀರಿನಿಂದ ಕೈ ತೊಳೆಯಬೇಕು ಎಂದು ವಿನಂತಿಸಲಾಯಿತು.

ಈ ಸಂದರ್ಭದಲ್ಲಿ ಪ್ರತ್ಯೇಕವಾಗಿ ವಿದ್ಯಾರ್ಥಿನಿಯರಿಗೆ ಋತುಚಕ್ರದ ನಿರ್ವಹಣೆ, ಶುಚಿತ್ವ ಕಾಪಾಡುವಿಕೆ ಕುರಿತು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಸರೋಜಾ ಕೆ ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಶಾಲಾ ಆಡಳಿತ ಸಮಿತಿ ಅಧ್ಯಕ್ಷರಾದ ರಮೇಶ್ ಕನಕುಂಟ್ಲಾ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ, ಮುಖ್ಯ ಗುರುಗಳು ಸವಿತಾ ಭಂಡಾರಿ, ನಿರ್ಮಲಾ ಹಿರೇಮಠ ಶರಣ ಬಸವೇಶ್ವರಿ ಸೌಜನ್ಯ, ಆರೋಗ್ಯ ನಿರೀಕ್ಷಣಾಧಿಕಾರಿ ಅರುಣ್ ಕುಮಾರ, ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿ ಅನ್ನಪೂರ್ಣ ಸೇರಿದಂತೆ ಶಾಲಾ ಮಕ್ಕಳು ಉಪಸ್ಥಿತರಿದ್ದರು.

## ಭವನ ನಿರ್ಮಾಣ ಕಾಮಗಾರಿಗೆ ಚಾಲನೆ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟೆ: ತಾಲ್ಲೂಕಿನ ಕಲಕೇರಿ ಗ್ರಾಮ ಪಂಚಾಯತಿ ವ್ಯಾಪ್ತಿಯ ರಾಂಪೂರ ಪಿ.ಟಿ ಗ್ರಾಮದಲ್ಲಿ ರೂ.1 ಕೋಟಿ ವೆಚ್ಚದ ಬಹುಪಯೋಗಿ ಭವನ ನಿರ್ಮಾಣ ಕಾಮಗಾರಿಗೆ ಗ್ರಾಮದ ಪ್ರಮುಖರಾದ ದಸ್ತಗೀರಪಟೇಲ ಬಿರಾದಾರ ಅವರು ಭಾನುವಾರ ಚಾಲನೆಯನ್ನು ನೀಡಿದರು.**



ಈ ಸಂದರ್ಭದಲ್ಲಿ ವಿಜಯಪುರ ಜಿಲ್ಲಾ ವಕ್ಫ್ ಮಂಡಳಿ ಉಪಾಧ್ಯಕ್ಷ ಮಹಮ್ಮದ್ ಅಲ್ತಾಫ ಲಕ್ಕುಂಡಿ, ಮುಖಂಡರಾದ ಅಹ್ಮದ್ ಹುಸೇನ ಮೋಮಿನ, ಗ್ರಾ.ಪಂ.ಸದಸ್ಯ ದ್ಯಾವಪ್ಪ ಹರಿಜನ, ಬಾಬು ಉಣ್ಣಿಭಾವಿ, ಭಾಷಾಸಾಬ ಸಿರಸಗಿ, ಲಾಳೇಸಾಬ ಬನ್ನೆಟ್ಟಿ, ಮಹಿಬೂಬಸಾಬ ಸಿರಸಗಿ, ಇಮಾಮಪಟೇಲ ಬಿರಾದಾರ, ಸಿದ್ದಯ್ಯ ನಂದಿಮಠ, ಖಾಸಿಂಸಾಬ್ ನಾಯ್ಕೋಡಿ, ಡಾ.ಎಂ.ಎಂ.ಗುಡ್ನಾಳ,ರಾಮರಾವ್ ದೇಶಮುಖ, ಗಫೂರಸಾಬ ಇಮಾರತವಾಲೆ, ಕಿರಣ ಕುಮಾರ ದೇಸಾಯಿ, ದಸ್ತಗೀರ ಪಟೇಲ ಬಿರಾದಾರ, ದ್ಯಾವಪ್ಪ ಹರಿಜನ್, ಎಂ.ಎಂ.ಲಷ್ಕರಿ, ಸಲೀಂ ನಾಯ್ಕೋಡಿ, ಎಚ್ ಡಿ ನದಾಫ್, ಡಾ.ಕೆ.ಎಂ.ಗುಡ್ನಾಳ, ನಬಿಸಾಬ ಸಿರಸಗಿ ಹಾಗೂ ರಾಮಪುರ, ಕಲಕೇರಿ ಹುಣಶ್ಯಾಳ ಗ್ರಾಮದ ಪ್ರಮುಖರು ಇದ್ದರು.

## ಮಸ್ಕಿ ತಹಸಿಲ್ದಾರ್ ಮಂಜುನಾಥ ಭೋಗಾವತಿ ನಾರಾಯಣ ನಗರ ಕ್ಯಾಪಿನ ಕುಡಿಯುವ ನೀರಿನ ಕೆರೆಗೆ ಭೇಟಿ ಪರಿಶೀಲನೆ

ನೈಜ್ಯ ದೆಸೆ ನ್ಯೂಸ್

**ಮಸ್ಕಿ: ತಾಲೂಕಿನ ಬಳಗಾನೂರು ಪಟ್ಟಣ ಪಂಚಾಯಿತಿ ವ್ಯಾಪ್ತಿಯ ನಾರಾಯಣನಗರ ಕ್ಯಾಂಪಿನ ಬಳಿ ಇರುವ ಕುಡಿಯುವ ನೀರಿನ ಕೆರೆಗೆ ಮಂಗಳವಾರ ತಹಸಿಲ್ದಾರ್ ಮಂಜುನಾಥ ಭೋಗಾವತಿಯವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.**



ನಂತರ ಮಾತನಾಡಿದ ಅವರು ಈಗಾಗಲೇ ಬೇಸಿಗೆ ಕಾಲ ಆರಂಭವಾಗುತ್ತಿದ್ದು ಮುಂಬರುವ ದಿನಗಳಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರಿನ ತೊಂದರೆ ಆಗಬಾರದು ಹಾಗೂ ಕೆರೆಯ ಬಳಿಗೆ ಜನ ಜಾನುವಾರುಗಳು ಹೋಗದಂತೆ ಮುಂಜಾಗ್ರತ ಕ್ರಮಗಳನ್ನು ತಾಲೂಕಿನಲ್ಲಿರುವ ಎಲ್ಲಾ ಕೆರೆಗಳಿಗೂ ಸಹ ಭೇಟಿ ನೀಡಿ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಲಾಗುವುದು ಇಲ್ಲಿನ ಬಳಗಾನೂರು ಪಟ್ಟಣ ವ್ಯಾಪ್ತಿಯ ನಾರಾಯಣ ನಗರ ಕ್ಯಾಂಪಿನ ಲ್ಲಿರುವ ಕುಡಿಯುವ ನೀರಿನ ಕೆರೆಯ ಸುತ್ತ ಮುತ್ತ ಜನವಾರುಗಳು ಬರೆದಂತೆ ಸುತ್ತಲೂ ತಂತಿ ಬೇಲಿ ಹಾಕಲು ಬಳಗಾನೂರು ಪಟ್ಟಣ ಪಂಚಾಯತ್ ಮುಖ್ಯ ಅಧಿಕಾರಿಗಳಿಗೆ ಸೂಚಿಸಿದರು. ಈ ಸಂದರ್ಭದಲ್ಲಿ ಗ್ರಾಮ ಲೆಕ್ಕಾಧಿಕಾರಿಗಳು ಸೇರಿದಂತೆ ಇನ್ನಿತರ ಸಿಬ್ಬಂದಿಗಳು ಇದ್ದರು.

## ಮಸ್ಕಿ ನವ ಗ್ರಾಮ ಬಡಾವಣೆಯಲ್ಲಿ ವಸತಿ ರಹಿತರಿಗೆ ನಿವೇಶನ ಹಂಚಲು ಕರವೇ ಅಧ್ಯಕ್ಷ ದುರ್ಗರಾಜ ಒತ್ತಾಯ

ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಪುರಸಭೆಯ ವ್ಯಾಪ್ತಿಯಲ್ಲಿ ಬರುವ ಲಿಂಗಸುಗೂರು ಮುಖ್ಯ ರಸ್ತೆ ಬಳಿಯಲ್ಲಿರುವ ಸರ್ವೆ ನಂ: 32 ರಲ್ಲಿ 6 ಎಕರೆ ಜಮೀನು ಖರಿದಿಸಿ ನಿವೇಶನ ರಹಿತ ಕುಟುಂಬಗಳಿಗೆ ಹಕ್ಕು ಪತ್ರ ವಿತರಿಸಲು ತಿರ್ಮಾನಿಸಿದ್ದು, ಪುನಃ ಸರ್ವೆ ಮಾಡಿ ನಿವೇಶನ, ಮನೆಯಿಲ್ಲದ ಫಲಾನುಭವಿಗಳಿಗೆ ಮಂಜೂರು ಮಾಡಬೇಕೆಂದು ಕರ್ನಾಟಕ ರಕ್ಷಣಾ ವೇದಿಕೆಯ ಪದಾಧಿಕಾರಿಗಳು ಪುರಸಭೆ ಅಧ್ಯಕ್ಷ ಸುರೇಶ ಹರಸೂರು ಮನವಿ ಪತ್ರ ಸಲ್ಲಿಸುವ ಮೂಲಕ ಮಂಗಳವಾರ ಒತ್ತಾಯಿಸಿದರು.**



ನಂತರ ದುರಗರಾಜ್ ವಟಗಲ್ ಮಾತನಾಡಿ, ಮಸ್ಕಿ ಗ್ರಾಮ ಪಂಚಾಯತಿ ಸಂದರ್ಭದಲ್ಲಿ ನವಗ್ರಾಮ (ಆಶ್ರಯ) ವಸತಿ ಯೋಜನೆಯಡಿಯಲ್ಲಿ ಹಕ್ಕುಪತ್ರ ವಿತರಣೆಗಾಗಿ ಸುಮಾರು 18-19 ವರ್ಷದ ಹಿಂದೆ ಸರ್ವೆ ನಂ: 32 ರಲ್ಲಿ 6 ಎಕರೆ ಜಮೀನು ಖರೀದಿಸಿ ಹಕ್ಕು ಪತ್ರಗಳನ್ನು ಕೆಲವು ಫಲಾನುಭವಿಗಳಿಗೆ ವಿತರಿಸಿ ಮನೆಗಳನ್ನು ನಿರ್ಮಿಸಲಾಗಿತ್ತು. ಈ ಪ್ರದೇಶಕ್ಕೆ ಮೂಲಭೂತ ಸೌಕರ್ಯಗಳಿಲ್ಲದ ಕಾರಣ ಫಲಾನುಭವಿಗಳು ವಾಸ ಮಾಡದೆ ಇದ್ದುದ್ದರಿಂದ ಕಟ್ಟಡವು ಪಾಳು ಬಿದ್ದಿದ್ದವು. ಇತ್ತೀಚೆಗೆ ಶಾಸಕರು ಮತ್ತು ಪುರಸಭೆಯ ಆಡಳಿತ ಮಂಡಳಿ ಈ ಮನೆಗಳನ್ನು ತೆರವುಗೊಳಿಸಿ ಮತ್ತೊಮ್ಮೆ ನಿವೇಶನಗಳನ್ನು ಗುರುತಿಸಿ ಹದ್ದುಬಸ್ತು ಮಾಡಿ ಮೂಲಭೂತ ಸವಲತ್ತುಗಳನ್ನು ಒದಗಿಸಿ ಫಲಾನುಭವಿಗಳಿಗೆ 236 ಫಲಾನುಭವಿಗಳಿಗೆ ಹಕ್ಕುಪತ್ರ ನೀಡಲು ಸಿದ್ದತೆ ನಡೆಸಿದ್ದಾರೆ.

ಪುರಸಭೆ ಮುಖ್ಯಾಧಿಕಾರಿಗಳು 175 ಜನ ನವ ಗ್ರಾಮದ ಫಲಾನುಭವಿಗಳೆಂದು ಮಾಹಿತಿ ನೀಡಿದ್ದಾರೆ. 175 ಫಲಾನುಭವಿಗಳ ಪೈಕಿ ಈಗಾಗಲೇ ಶೇ.50 ರಷ್ಟು ಫಲಾನುಭವಿಗಳು ಮರಣ ಹೊಂದಿದ್ದಾರೆ. ಇನ್ನೂಳಿದ ಶೇ 50ರ ಪೈಕಿ ಶೇ.30 ರಷ್ಟು ಶ್ರೀಮಂತರ ವರ್ಗಕ್ಕೆ ಸೇರಿದ ಫಲಾನುಭವಿಗಳಾಗಿದ್ದು, ಈ ಹಿಂದೆ ಆಯ್ಕೆ ಮಾಡಿದ ಫಲಾನುಭವಿಗಳನ್ನು ಸಂಪೂರ್ಣವಾಗಿ ರದ್ದುಗೊಳಿಸಿ, ಹೊಸದಾಗಿ ಆರ್ಥಿಕವಾಗಿ ದುರ್ಬಲರಾದ ಫಲಾನುಭವಿಗಳು ನಿವೇಶನಕ್ಕಾಗಿ ಅರ್ಜಿಗಳನ್ನು ಸಲ್ಲಿಸಲು ಪ್ರಕಟಣೆ ಹೊರಡಿಸಿ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಿ ಹಕ್ಕುಪತ್ರಗಳನ್ನು ನೀಡಬೇಕೆಂದು ಒತ್ತಾಯಿಸಿದರು. ಒಂದು ವೇಳೆ ಹೊಸದಾಗಿ ಅರ್ಜಿಗಳನ್ನು ಕರೆಯದೇ ಈ ಹಿಂದಿನ ಫಲಾನುಭವಿಗಳಿಗೆ ಹಕ್ಕುಪತ್ರಗಳನ್ನು ವಿತರಿಸಿದರೆ ಸಂಘಟನೆಯಿಂದ ಪುರಸಭೆ ಕಾರ್ಯಲಯ ಅನಿರ್ಧಿಷ್ಟಾವಧಿ ಧರಣಿ ಗ್ರಹ ಹಮ್ಮಿಕೊಳ್ಳಲಾಗುತ್ತದೆ ಎಂದು ಎಚ್ಚರಿಸಿದರು. ಈ ಸಂದರ್ಭದಲ್ಲಿ ನೂರ್ ಆಹ್ಮದ್, ಸುರೇಶ ಕಾಟಗಲ್, ಮೌನೇಶ, ಮುದಿಯಪ್ಪ, ಅಯ್ಯಪ್ಪ, ಬಸವರಾಜ, ಅಭಿಷೇಕ್ ಸೇರಿದಂತೆ ಇನ್ನಿತರರಿದ್ದರು.

## ಸಾಹಿತ್ಯ ಸಿಂಚನ

ಬೆಳಗಿನ ತಂಪಿನ ಗಾಳಿ ತಾಗಿದಾಗ,
ಮನವು ಹಕ್ಕಿಯಂತೆ ಹಾರಿಬಿಡುತ್ತದೆ.
ಹಸಿರು ಮರಗಳ ನೆರಳಿನಡಿಯಲ್ಲಿ,
ಜೀವನದ ರಾಗವು ಮಧುರವಾಗುತ್ತದೆ.

ನದಿಯ ನುಡಿಯಲಿ ಮೃದು ಸಂಗೀತ,
ಗಿರಿಯ ನಿಲುವಿನಲ್ಲಿ ಗಂಭೀರ ಗೀತ.
ಹೂವಿನ ಸುಗಂಧವು ಹರಡಿದಾಗ,
ಭೂಮಿಯೇ ನಗುವ ತಾಯಿಯಂತೆ ಕಾಣುತ್ತದೆ.
ಮೋಡಗಳ ಆಟದಲಿ ಆಕಾಶ ಹಾಸು,
ಮಳೆಯ ಹನಿಯಲ್ಲಿ ಜೀವದ ವಾಸು.

ಪ್ರಕೃತಿಯ ಮಡಿಲಲ್ಲಿ ಕ್ಷಣಕಾಲ ಕೂತರೆ,
ಎಲ್ಲ ನೋವುಗಳು ಮರೆತು ಹೋಗುವವು ನೆನೆದೆ.
ಬನ್ನಿ ನಾವು ಕಾಪಾಡೋಣ ಈ ಧರಿತ್ರೀ,
ಇದು ನಮ್ಮ ಬದುಕಿನ ನಿಜವಾದ ಸಂಪತ್ತೀ.
ಪ್ರಕೃತಿ ಉಳಿದರೆ ನಾವೂ ಉಳಿಯುವೆವು,
ಇದರ ಪ್ರೀತಿಗೆ ಸದಾ ಕೃತಜ್ಞರಾಗಿರುವೆವು

**ಕೆ ಅಮರೇಶ್**

# ಸ್ನೇಹ ನಿಸ್ವಾರ್ಥತೆಯ ಪ್ರತೀಕ, ಜೀವನದ ನಿಜವಾದ ಸಂಪತ್ತು :ರಮೇಶಬಾಬು ಯಾಳಗಿ

ನೈಜ್ಯ ದೆಸೆ ನ್ಯೂಸ್

ಮಾನ್ವಿ: ಈ ಜಗತ್ತಿನಲ್ಲಿ ಬೀಸುವ ತಂಗಾಳಿ ಎಂದರೆ ಸ್ನೇಹ ಒಂದೇ. ಎಂಥಹ ಸಮಯದಲ್ಲೂ "ನಾನಿದ್ದೇನೆ ನಿನ್ನ ಜೊತೆಗೆ" ಎಂದು ನೋವಿನಿಂದ ಅತ್ತಾಗ ಸಂತೈಸಲು, ನಲಿವಿನಿಂದ ನಕ್ಕಾಗ ಜೊತೆಯಾಗಿರಲು ಸ್ನೇಹಿತರು ಬೇಕೇ ಬೇಕು ಎಂದು ಸಾಹಿತಿ ಹಾಗೂ ವಾಗ್ಮಿ ರಮೇಶಬಾಬು ಯಾಳಗಿ ಹೇಳಿದರು.

ಅವರು ತಾಲೂಕಿನ ಜಾಗಿರಪನ್ನೂರು ಗ್ರಾಮದ ಲೋಯೋಲಾ ಕಪೆಪಲಾಡಿ ಶಾಲೆಯಲ್ಲಿ ಆಯೋಜಿಸಿದ್ದ ಹಳೆಯ ವಿದ್ಯಾರ್ಥಿಗಳ ಸ್ನೇಹ ಸಮ್ಮಿಲನ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದರು. ಪ್ರೀತಿಯಲ್ಲಿ ಹಲವು ಸಲ ಸ್ವಾರ್ಥ ಹಾಗೂ ಸುಖದ ವಿರಸ ಕಾಣಬಹುದು. ಆದರೆ ಸ್ನೇಹದಲ್ಲಿ ಯಾವಾಗಲೂ ಸಮರಸಭಾವದ ನಿಸ್ವಾರ್ಥತೆ ಇರುತ್ತದೆ. ಕಷ್ಟದ ದಿನಗಳಲ್ಲಿ



ಕೈ ಹಿಡಿದು ಮುನ್ನಡೆಸುವ ಸ್ನೇಹಿತರೇ ನಮ್ಮೆಲ್ಲರ ನಿಜವಾದ ಸಂಪತ್ತು. ಪವಿತ್ರವಾದ ಸ್ನೇಹದಲ್ಲಿ ಜಾತಿ ಭೇದಭಾವವಿರುವುದಿಲ್ಲ, ಅಂತಸ್ತಿನ ಅಹಂಕಾರವೂ ಇರುವುದಿಲ್ಲ ಹಾಗೂ ಹಣದ ಪ್ರಭಾವವೂ ಕಾಣುವುದಿಲ್ಲ. ಸಜ್ಜನಿಕೆಯ ಸ್ನೇಹಿತರು ದೇವರು ಕೊಟ್ಟ ವರವಾಗಿದ್ದು, ಸ್ನೇಹಿತರ ಆಯ್ಕೆಯಲ್ಲಿ ಜಾಗೃತಿ ವಹಿಸುವುದು ಇಂದಿನ ದಿನಗಳಲ್ಲಿ ಅಗತ್ಯವಾಗಿದೆ ಎಂದು ಯಾಳಗಿ ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲೆಯ ನಿರ್ದೇಶಕರಾದ ವಂದನೀಯ ಫಾದರ್ ರಾಯಪ್ಪ ವಹಿಸಿದ್ದರು. ವೇದಿಕೆಯಲ್ಲಿ ಶಾಲೆಯ ಸಹಾಯಕ ನಿರ್ದೇಶಕರಾದ ವಂದನೀಯ ಫಾದರ್ ಬರ್ತಾಲೋಮ್, ಮುಖ್ಯ ಗುರುಗಳಾದ ಸಿಸ್ಟರ್ ಸೆಲಿನಾ ಮೇರಿ, ಕಾರ್ಯಕ್ರಮದ ಸಂಯೋಜಕರಾದ ಶಿಕ್ಷಕ ಮರಿಯಪ್ಪ ಹಾಗೂ ವೀರೇಶ್ ಗೌಡ ಉಪಸ್ಥಿತರಿದ್ದರು. ಸಮಾರಂಭದಲ್ಲಿ ಶಾಲೆಯ ಶಿಕ್ಷಕರು ಮತ್ತು ಹಳೆಯ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ ಅತಿ ಹೆಚ್ಚು ಅಂಕಗಳೊಂದಿಗೆ ಉತ್ತೀರ್ಣರಾದ ಹಳೆಯ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ಶಿಕ್ಷಕಿ ಸರಿತಾ ಸ್ವಾಗತಿಸಿದರು, ಶಿಕ್ಷಕ ಮರಿಯಪ್ಪ ಅತಿಥಿಗಳನ್ನು ಪರಿಚಯಿಸಿದರು, ವೀರೇಶ್ ಗೌಡ ಹಾಗೂ ಆನಂದ ಕಾರ್ಯಕ್ರಮ ನಿರೂಪಿಸಿದರು, ಶಿಕ್ಷಕಿ ಪ್ರಮೀಳಾ ವಂದಿಸಿದರು.

# ಆಶಿಹಾಳ ತಾಂಡಾದ ಭಾಗ್ಯರತ್ನ ನಾಯ್ಕ ಸಿವಿಲ್ ನ್ಯಾಯಾಧೀಶರಾಗಿ ಆಯ್ಕೆ

ನೈಜ್ಯ ದೆಸೆ ನ್ಯೂಸ್

ಕರ್ನಾಟಕ ಉಚ್ಚ ನ್ಯಾಯಾಲಯ ಪ್ರಕಟಿಸಿದ 83 ಸಿವಿಲ್ ನ್ಯಾಯಾಧೀಶರ ಆಯ್ಕೆ ಪಟ್ಟಿಯಲ್ಲಿ ಸ್ಥಾನ ಪಡೆದಿರುವ ಲಿಂಗಸುಗೂರು ತಾಲ್ಲೂಕಿನ ಆಶಿಹಾಳ ತಾಂಡಾದ ಕು. ಭಾಗ್ಯರತ್ನ ನಾಯ್ಕ ಅವರ ಸಾಧನೆ ಸಮಸ್ತ ಪ್ರದೇಶಕ್ಕೆ ಹೆಮ್ಮೆ ತಂದಿದೆ.

ಗ್ರಾಮೀಣ ಹಾಗೂ ಹಿಂದುಳಿದ ತಾಂಡಾ ಪ್ರದೇಶದಿಂದ ನ್ಯಾಯಾಂಗ ಕ್ಷೇತ್ರಕ್ಕೆ ಪ್ರವೇಶಿಸಿರುವುದು ವಿಶೇಷ ಸಾಧನೆಯಾಗಿದೆ. ಬಾಲ್ಯದಿಂದಲೇ ಶ್ರದ್ಧೆ, ಪರಿಶ್ರಮ ಮತ್ತು ಗುರಿನಿಷ್ಠೆಯೊಂದಿಗೆ ವಿದ್ಯಾಭ್ಯಾಸ ಮಾಡಿದ ಭಾಗ್ಯರತ್ನ ಅವರು ತಮ್ಮ ಕುಟುಂಬದ ಶಿಸ್ತು



ಮತ್ತು ಮಾರ್ಗದರ್ಶನವನ್ನು ಆದರ್ಶವಾಗಿ ತೆಗೆದುಕೊಂಡು ಸಾಧನೆ ಮಾಡಿದ್ದಾರೆ. ಅವರು ಮೈಸೂರಿನ ವಿದ್ಯಾವರ್ಧಕ ಕಾನೂನು ಕಾಲೇಜುದಲ್ಲಿ ಕಾನೂನು ಪದವಿ ಅಭ್ಯಾಸ ಮಾಡಿ 2022ರಲ್ಲಿ ಹತ್ತನೇ ರ್ಯಾಂಕ್ ಪಡೆದಿದ್ದಾರೆ. ಬಳಿಕ 2025ರಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯ ನಡೆಸಿದ ಸಿವಿಲ್ ನ್ಯಾಯಾಧೀಶರ ನೇಮಕಾತಿ ಪರೀಕ್ಷೆಯಲ್ಲಿ ಎಂಟನೇ ಸ್ಥಾನ ಪಡೆದು ಆಯ್ಕೆಯಾಗಿದ್ದಾರೆ.

ಇದು ಅವರ ನಿರಂತರ ಪರಿಶ್ರಮದ ಫಲವಾಗಿದೆ. ನ್ಯಾಯಾಂಗ ಸೇವೆ ಎನ್ನುವುದು ಅತ್ಯಂತ ಜವಾಬ್ದಾರಿಯುತ ಕ್ಷೇತ್ರ. ನ್ಯಾಯ, ಸತ್ಯ ಮತ್ತು ಸಂವಿಧಾನದ ಮೌಲ್ಯಗಳನ್ನು ಕಾಪಾಡುವ ಮಹತ್ತರ ಹೊಣೆಗಾರಿಕೆಯನ್ನು ಭಾಗ್ಯರತ್ನ ಅವರು ಯಶಸ್ವಿಯಾಗಿ ನಿರ್ವಹಿಸಲಿ ಎಂಬುದು ಎಲ್ಲರ ಆಶಯವಾಗಿದೆ. ಆಶಿಹಾಳ ತಾಂಡಾ, ಲಿಂಗಸುಗೂರು ಹಾಗೂ ಸಂಪೂರ್ಣ ರಾಯಚೂರು ಜಿಲ್ಲೆಯ ಜನತೆ ಅವರ ಸಾಧನೆಗೆ ಹರ್ಷ ವ್ಯಕ್ತಪಡಿಸಿ ಅಭಿನಂದನೆ ಸಲ್ಲಿಸುತ್ತಿದ್ದಾರೆ. ಯುವತಿಯರಿಗೆ ವಿಶೇಷವಾಗಿ ಇದು ಪ್ರೇರಣಾದಾಯಕ ಉದಾಹರಣೆಯಾಗಿದ್ದು, ಶಿಕ್ಷಣದ ಮೂಲಕ ಏನು ಬೇಕಾದರೂ ಸಾಧಿಸಬಹುದು ಎಂಬುದನ್ನು ಅವರು ಸಾಬೀತುಪಡಿಸಿದ್ದಾರೆ. ಕು. ಭಾಗ್ಯರತ್ನ ನಾಯ್ಕ ಅವರ ಮುಂದಿನ ನ್ಯಾಯಾಂಗ ಸೇವಾ ಜೀವನ ಯಶಸ್ವಿಯಾಗಲಿ ಎಂದು ಹಾರೈಸೋಣ.

## ಕೊಟ್ಟೂರೇಶ್ವರ ದೇವಸ್ಥಾನದ ಜಾತ್ರಾ ಮಹೋತ್ಸವ ಭಾನುವಾರ

ನೈಜ್ಯ ದೆಸೆ ನ್ಯೂಸ್

ಕೊಟ್ಟೂರೇಶ್ವರ ದೇವಸ್ಥಾನದ ಜಾತ್ರಾ ಮಹೋತ್ಸವ ಭಾನುವಾರ ಭಕ್ತ ಸಮ್ಮುಖದಲ್ಲಿ ಸಂಭ್ರಮದಿಂದ ಜರುಗಿತು. ಜಾತ್ರಾ ಮಹೋತ್ಸವದ ನಿಮಿತ್ತ ಕೊಟ್ಟೂರೇಶ್ವರ ದೇವರ ಮೂರ್ತಿಗೆ ಪಂಚಾಮೃತ ಅಭಿಷೇಕ, ಕುಂಕುಮಾರ್ಚನೆ, ವಿಶೇಷ ಹೂವಿನ ಅಲಂಕಾರ, ಮಹಾಮಂಗಳಾರತಿ ಸೇರಿ ವಿವಿಧ ಧಾರ್ಮಿಕ ಪೂಜಾ ಕಾರ್ಯಕ್ರಮ ಜರುಗಿದವು.



ನಂತರ ಪಲ್ಲಕ್ಕಿಯಲ್ಲಿ ಕೊಟ್ಟೂರೇಶ್ವರ ದೇವರ ಮೂರ್ತಿ ಮೆರವಣಿಗೆ ನಡೆಯಿತು. ಸಂಜೆ ದೇವಸ್ಥಾನ ಆವರಣದಿಂದ ಸಂಭ್ರಮದ ರಥೋತ್ಸವ ಜರುಗಿತು. ದೇವರನ್ನು ಕೈ ಮುಗಿದು ಭಕ್ತರು ಭಕ್ತಿ ಮೆರೆದರು. ಸ್ಥಳೀಯ ಮುಖಂಡರು ಸೇರಿದಂತೆ ಗ್ರಾಮೀಣ ಭಾಗದ ಭಕ್ತರು ಇದ್ದರು.

## ಮಸ್ಕಿ ತಹಸೀಲ್ದಾರ್ ಮಂಜುನಾಥ್ ಭಗವತಿ ಅಧ್ಯಕ್ಷತೆಯಲ್ಲಿ ವಿವಿಧ ಜಯಂತಿ ಆಚರಣೆ ಪೂರ್ವಭಾವಿ ಸಭೆ

ನೈಜ್ಯ ದೆಸೆ ನ್ಯೂಸ್

ಮಸ್ಕಿ: ತಾಲೂಕಾಡಳಿತವತಿಯಿಂದ ವಿವಿಧ ಮಹನೀಯರ ಜಯಂತಿಗಳನ್ನು ಅತ್ಯಂತ ಅಚ್ಚುಕಟ್ಟಾಗಿ ಆಚರಣೆ ಮಾಡಲಾಗುತ್ತದೆ ಎಂದು ತಹಶೀಲ್ದಾರ್ ಮಂಜುನಾಥ ಭೋಗವತಿ ರವರು ಹೇಳಿದರು.





ಪಟ್ಟಣದ ಬಸವೇಶ್ವರ ನಗರದಲ್ಲಿರುವ ತಹಶೀಲ್ದಾರ್ ಕಾರ್ಯಾಲಯದ ಸಭಾಂಗಣದಲ್ಲಿ ಮಂಗಳವಾರ ವಿವಿಧ ಜಯಂತಿಗಳ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಮಾರ್ಚ 01 ರಂದು ರೇಣುಕಾಚಾರ್ಯ ಜಯಂತಿ, ಹಾಗೂ ಮಾರ್ಚ 03 ರಮದು ಯೋಗಿ ನಾರೇಯಣ ಯತೀಂದ್ರರ (ಕೈವಾರ ತಾತಯ್ಯ) ಜಯಂತಿಯನ್ನು ತಾಲೂಕಾಡಳಿತದಿಂದ ಅದ್ದೂರಿಯಾಗಿ ಆಚರಣೆ ಮಾಡಲಾಗುತ್ತದೆ ಎಂದು ಹೇಳಿದರು.

# ಮಸ್ಕಿ ಶಾಸಕ ಆರ್ ಬಸನಗೌಡ ತುರುವಿಹಾಳರಿಂದ ಒಳಾಂಗಣ ಕ್ರೀಡಾಂಗಣ ಕಾಮಗಾರಿ ಪರಿಶೀಲನೆ

## ಸೂಕ್ತ ಗುಣಮಟ್ಟದಿಂದ ನಿಗದಿತ ಅವಧಿ ಒಳಗಡೆ ಕಾಮಗಾರಿ ಮುಗಿಸಿ: ಶಾಸಕ ಆರ್ ಬಸನಗೌಡ

ನೈಜ್ಯ ದೆಸೆ ನ್ಯೂಸ್

ಮಸ್ಕಿ: ಮಸ್ಕಿ ಪಟ್ಟಣದಲ್ಲಿ ಒಂದು ಕೋಟಿ ಎಂಬತ್ತು ಲಕ್ಷ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಒಳಾಂಗಣ ಕ್ರೀಡಾಂಗಣ ಕಾಮಗಾರಿಯನ್ನು ಖಾದಿ ಗ್ರಾಮೋದ್ಯೋಗ ನಿಗಮದ ಅಧ್ಯಕ್ಷ ಶಾಸಕ ಆರ್ ಬಸನಗೌಡ ತುರುವಿಹಾಳ ಅವರು ಮಂಗಳವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ನಂತರ ಈ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಮಸ್ಕಿ ಪಟ್ಟಣವು ತಾಲೂಕು ಕೇಂದ್ರವಾಗಿರುವುದರಿಂದ ಇಲ್ಲಿನ ಪ್ರತಿನಿತ್ಯ ಕ್ರೀಡಾಭಿಮಾನಿಗಳಿಗೆ ಹಾಗೂ



ಕ್ರೀಡಾಪಟುಗಳಿಗೆ ಸುಸಜ್ಜಿತವಾದ ಒಳಾಂಗಣ ಕ್ರೀಡಾಂಗಣ ನಿರ್ಮಿಸುವುದಕ್ಕಾಗಿ ಈಗಾಗಲೇ ಕಾಮಗಾರಿ ಆರಂಭವಾಗಿದ್ದು ಗುತ್ತಿಗೆದಾರರು ಸಹ ಸೂಕ್ತ ಗುಣಮಟ್ಟದಿಂದ ಕಾಮಗಾರಿಯನ್ನು ನಿಗದಿತ ಅವಧಿಯೊಳಗೆ ಮಾಡಿ ಮುಗಿಸಿ ಇದರಿಂದ ಜನರಿಗೆ ಅನುಕೂಲವಾಗಲಿದೆ ಅಲ್ಲದೆ ಮುಂಬರುವ ದಿನಗಳಲ್ಲಿ ಪಟ್ಟಣದ ಅಭಿವೃದ್ಧಿಗಾಗಿ ಇನ್ನಷ್ಟು ಯೋಜನೆಗಳನ್ನು ರೂಪಿಸಲಾಗುವುದು.

ಸಾರ್ವಜನಿಕರ ಅನುಕೂಲಕ್ಕಾಗಿ ಸುಸಜ್ಜಿತವಾದ ಉದ್ಯಾನವನವನ್ನು ಸಹ ನಿರ್ಮಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಹೇಳಿದರು ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ನಿರುಪಾದೆಪ್ಪ ವಕೀಲರು ಸೇರಿದಂತೆ ಕ್ಯಾಶ್ಯೂ ಟೆಕ್ ಇಲಾಖೆಯ ಇಂಜಿನಿಯರ್ ತಿಮ್ಮಣ್ಣ ಹಾಗೂ ಇನ್ನಿತರರು ಇದ್ದರು.

# ರೈತನ ಜೋಳದ ರಾಶಿಗೆ ಬೆಂಕಿ :ತಪ್ಪಿತಸ್ಥರನ್ನು ಪತ್ತೆಹಚ್ಚಿ ಕ್ರಮ ಕೈಗೊಳ್ಳಬೇಕು ರಾಜಾ ವೆಂಕಟಪ್ಪ ನಾಯಕ



ನೈಜ್ಯ ದೆಸೆ ನ್ಯೂಸ್

ಮಾನ್ವಿ: ತಾಲೂಕಿನ ಜಾಗೀರಪನ್ನೂರು ಗ್ರಾಮದಲ್ಲಿನ ರೈತ ಯಂಕೋಬರವರ ಜಮೀನಿನಲ್ಲಿ ಹಾಕಲಾದ ಜೋಳದ ರಾಶಿಗೆ ಬೆಂಕಿ ಬಿದ್ದು ಸಂಪೂರ್ಣವಾಗಿ ಸುಟ್ಟು ಭಸ್ಮವಾಗಿರುವ ಘಟನೆ ನಡೆದಿದ್ದು, ಸ್ಥಳಕ್ಕೆ ಮಾಜಿ ಶಾಸಕರಾದ ರಾಜಾ ವೆಂಕಟಪ್ಪ ನಾಯಕ ಭೇಟಿ ನೀಡಿ ಪರಿಶೀಲನೆ ನಡೆಸಿದರು.



ಈ ವೇಳೆ ಮಾತನಾಡಿದ ಅವರು, ಕಿಡಿಗೇಡಿಗಳು ಉದ್ದೇಶಪೂರ್ವಕವಾಗಿ ಬೆಂಕಿ ಹಚ್ಚಿರುವ ಅನುಮಾನವಿದ್ದು, ಸಂಬಂಧಿಸಿದ ತನಿಖಾಧಿಕಾರಿಗಳು ಸೂಕ್ತ ತನಿಖೆ ನಡೆಸಿ ಆರೋಪಿಗಳನ್ನು ಪತ್ತೆಹಚ್ಚಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಅಲ್ಲದೆ, ಬೆಂಕಿಯಿಂದ ನಷ್ಟ ಅನುಭವಿಸಿರುವ ರೈತರಿಗೆ ಸರ್ಕಾರದಿಂದ ಸೂಕ್ತ ಪರಿಹಾರ ಒದಗಿಸಬೇಕು ಎಂದು ಆಗ್ರಹಿಸಿದರು. ಅವರು ರೈತ ಯಂಕೋಬರವರಿಗೆ ಸಾಂತ್ವನ ಹೇಳಿ ಧೈರ್ಯ ತುಂಬಿದರು.

ರೈತರು ಈಗಾಗಲೇ ಅನೇಕ ಸಂಕಷ್ಟಗಳನ್ನು ಎದುರಿಸುತ್ತಿರುವ ಸಂದರ್ಭದಲ್ಲಿ ಇಂತಹ ಘಟನೆಗಳು ಅವರ ಜೀವನಕ್ಕೆ ದೊಡ್ಡ ಹೊಡೆತ ನೀಡುತ್ತವೆ. ಆದ್ದರಿಂದ ಸರ್ಕಾರ ರೈತರ ಸಂಕಷ್ಟಕ್ಕೆ ಸ್ಪಂದಿಸಿ ತಕ್ಷಣ ಪರಿಹಾರ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಜೆ.ಡಿ.ಎಸ್. ಪಕ್ಷದ ರಾಜ್ಯ ಯುವ ಘಟಕದ ಉಪಾಧ್ಯಕ್ಷ ರಾಜಾ ರಾಮಚಂದ್ರ ನಾಯಕ, ಶರಣಪ್ಪಗೌಡ ಮದ್ಲಾಪುರ, ಬಾಷಾ ಸಾಬ್, ಪಿ. ರವಿಕುಮಾರ ವಕೀಲರು, ಯಲ್ಲಪ್ಪ ನಾಯಕ ವಕೀಲರು, ಸಂಗನಗೌಡ ಜಾಗೀರಪನ್ನೂರು, ವಿಜಯ್ ನಾಯಕ ಕೊಟ್ನೆಕಲ್, ಖಾಸಿಂ ಸಾಬ್ ಚಿಕಲಪರ್ವಿ, ಬಸವರಾಜ ಸ್ವಾಮಿ ಚಿಕಲಪರ್ವಿ, ಬಸವರಾಜ ಜಾಗೀರಪನ್ನೂರು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಸಿಂಧನೂರಿನ ಕಾರುಣ್ಯಾಶ್ರಮವು ಕರ್ಮಭೂಮಿಯಲ್ಲ ಇದು ಪುಣ್ಯಭೂಮಿ :ಪ್ರಸನ್ನ ಪಾಟೀಲ್

ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಪದ್ಮಾವತಿ ಪಾಟೀಲ್ ಪ್ರತಾಪಗೌಡ ಪಾಟೀಲ್ ಮಾಜಿ ಶಾಸಕರು ಮಸ್ಕಿ ವಿಧಾನಸಭಾ ಕ್ಷೇತ್ರ ಆದರ್ಶ ದಂಪತಿಗಳ ಮಗನಾದ ಮಸ್ಕಿ ವಿಧಾನಸಭಾ ಕ್ಷೇತ್ರದ ಯುವ ಚೇತನ ಯುವಕರ ಕಣ್ಮಣಿಯಾದ ಪ್ರತಾಪಗೌಡ ಪಾಟೀಲ್ ಫೌಂಡೇಶನ್ ನ ಅಧ್ಯಕ್ಷರಾದ ಪ್ರಸನ್ನ ಪಾಟೀಲ್ ಅವರ 40ನೇ ವರ್ಷದ ಜನ್ಮ ಸಾರ್ಥಕ ದಿನವನ್ನು ಪ್ರತಾಪಗೌಡ ಪಾಟೀಲ್ ಅಭಿಮಾನಿ ಬಳಗ ಸಿಂಧನೂರು ಹಾಗೂ ಮಸ್ಕಿ ಇವರಗಳ ವತಿಯಿಂದ ಸಿಂಧನೂರು ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆಯಾದ ಶ್ರೀಮಠ ಸೇವಾ ಟ್ರಸ್ಟ್ (ರಿ) ಹರೇಟನೂರು ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ.

ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಲ್ಲಿ ದೇವರಾಜ ಜಾಲವಾಡಗಿ ಹಾಗೂ ಶರಣಬಸವ ಪಾಟೀಲ್ ನಾಗರಬೆಂಚಿ ಇವರುಗಳ ವತಿಯಿಂದ ಮಹಾಪ್ರಸಾದ ಸೇವೆ ಹಣ್ಣು ಹಂಪಲುಗಳನ್ನು ವಿತರಿಸುವ ಮೂಲಕ " ನಿಮ್ಮೊಂದಿಗೆ ನಾವಿದ್ದೇವೆ" ಎನ್ನುವ ವಿಶೇಷ ಕಾರ್ಯಕ್ರಮದಡಿಯಲ್ಲಿ ಅರ್ಥಪೂರ್ಣವಾಗಿ ನೆರವೇರಿತು. ಈ ಕಾರ್ಯಕ್ರಮದಲ್ಲಿ ಕಾರುಣ್ಯ ಕುಟುಂಬದಿಂದ ಪ್ರಸನ್ನ ಪಾಟೀಲ್ ಅವರನ್ನು ಹಾಗೂ ಸಿಂಧನೂರು ತಾಲೂಕ ವಕೀಲರ ಸಂಘದ ಪ್ರಧಾನ




ಕಾರ್ಯದರ್ಶಿಗಳಾದ ದುರುಗೇಶ ಇವರುಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ನಂತರ ಪ್ರತಾಪಗೌಡ ಪಾಟೀಲ್ ಫೌಂಡೇಶನ್ ನ ಅಧ್ಯಕ್ಷರಾದ ಪ್ರಸನ್ನ ಪಾಟೀಲ್ ಮಾತನಾಡಿ ಸಿಂಧನೂರು ಹಾಗೂ ಮಸ್ಕಿ ಕ್ಷೇತ್ರದ ಗುರುಹಿರಿಯರು ಹಾಗೂ ಯುವಕರು ನಮ್ಮ ಕುಟುಂಬದ ಮೇಲಿಟ್ಟಿರುವ ಪ್ರೀತಿ ವಿಶ್ವಾಸಕ್ಕೆ ನಾವು ಚಿರಋಣಿಯಾಗಿದ್ದೇವೆ. ಇಂದಿನ ನನ್ನ ಈ ಜನ್ಮ ಸಾರ್ಥಕ ದಿನ ಕಾರುಣ್ಯ ಕುಟುಂಬದಲ್ಲಿ ಆಶ್ರಯ ಪಡೆದಿರುವ ಎಲ್ಲಾ ಶರಣರ ಆಶೀರ್ವಾದ ಸ್ವೀಕರಿಸಿ ಧನ್ಯನಾದೆನು ನಮ್ಮ ಭಾರತೀಯ ಸಂಸ್ಕೃತಿ ಉಳಿಯಬೇಕಾದರೆ ನಾವೆಲ್ಲರೂ ಹಿರಿಯರನ್ನು ಗೌರವಿಸಬೇಕು.

ನನ್ನ ಹೆತ್ತವರು ಹಾಗೂ ನಮ್ಮ ಕುಟುಂಬದ ಅಭಿಮಾನಿಗಳು ನನಗೆ ಸಂಸ್ಕೃತಿಯ ಪಾಠವನ್ನು ಮಾಡಿ ಸಮಾಜದಲ್ಲಿ ನಾವು ಮಾಡುವ ಅನೇಕ ಕಾರ್ಯಗಳಿಗೆ ಕಾರಣೀಕರ್ತರಾಗಿದ್ದಾರೆ. ವೃದ್ಧಾಶ್ರಮಗಳು ಹೆಚ್ಚಾದಂತೆಲ್ಲ ಮನುಷ್ಯರಲ್ಲಿ ಮಾನವೀಯತೆ ಗುಣ ಉಳಿದಿಲ್ಲ ಎಂದರ್ಥ ಸುಮಾರು ವರ್ಷಗಳಿಂದ ಈ ಕಾರುಣ್ಯ ಕುಟುಂಬದ ಸೇವೆಯನ್ನು ನಮ್ಮ ಕುಟುಂಬ ಅರಿತುಕೊಂಡಿದೆ. ಇಂತಹ ಪ್ರಾಮಾಣಿಕ ಸೇವೆಗೆ ಸರ್ಕಾರ ಮತ್ತು ಸರ್ವ ನಾಗರಿಕರು ಸಹಾಯ ಸಹಕಾರ ತೋರಿದಾಗ ಮಾತ್ರ ನಾವುಗಳು ಭಾರತಾಂಬೆಯ ಮಡಿಲಿನ ಮಕ್ಕಳಾಗುತ್ತೇವೆ. ಈಗಾಗಲೇ ಆಶ್ರಮದ ಸಂಸ್ಥಾಪಕರಾದ ಚನ್ನಬಸಯ್ಯ ಸ್ವಾಮಿಯವರು ಇದನ್ನು ಕರ್ಮಭೂಮಿ ಎಂದು ಹೇಳಿದರು.

ನನ್ನ ಅನಿಸಿಕೆಯ ಪ್ರಕಾರ ನಮ್ಮ ಸಿಂಧನೂರಿನ ಕಾರುಣ್ಯಾಶ್ರಮವು ಕರ್ಮಭೂಮಿಯಲ್ಲ ಇದು ಪುಣ್ಯಭೂಮಿ ಏಕೆಂದರೆ ಎಲ್ಲೋ ಹುಟ್ಟಿ ಎಲ್ಲೋ ಬೆಳೆದು ಈ ಪುಣ್ಯ ಪ್ರೇಮಿಯಲ್ಲಿ ಆಶ್ರಯ ಪಡೆಯುತ್ತಿರುವ ಆಶ್ರಯದಾತರುಗಳು ದೇವರ ಮಕ್ಕಳಾಗಿದ್ದಾರೆ. ಇವರುಗಳ ಸೇವೆ ನಾವು ನೀವೆಲ್ಲರೂ ಮಾಡಿದಾಗ ಮಾತ್ರ ದೇವರಿಗೆ ನಾವೆಲ್ಲರೂ ಇಷ್ಟವಾಗಿ ನಮ್ಮ ಸಂಕಲ್ಪಗಳನ್ನು ದೇವರು ಈಡೇರಿಸುತ್ತಾನೆ. ಚಿಕ್ಕ ಗ್ರಾಮವಾದ ಹರೆಟನೂರಿನ ಕಡುಬಡತನದ ಜಂಗಮನ ಕುಟುಂಬ ತನ್ನ ಜೋಳಿಗೆ ಮೂಲಕ ಇಂತಹ ಸೇವಾ ಕಾರ್ಯಕ್ಕೆ ಜೀವನ ಮುಡಿಪಾಗಿಟ್ಟಿರುವುದು ಜಂಗಮ ಎನ್ನುವ ಸಂಸ್ಕೃತಿಗೆ ಸಂಪೂರ್ಣ ಅರ್ಥ ಕಲ್ಪಿಸಿಕೊಟ್ಟಿದೆ.

ಇಂದಿನ ಈ ಪುಣ್ಯಕ್ಷೇತ್ರದಲ್ಲಿ ಹರಸಿ ಹಾರೈಸಿ ಆಶೀರ್ವದಿಸಿರುವ ಆಶ್ರಯದಾತರುಗಳಿಗೆ ಹಾಗೂ ನನ್ನೆಲ್ಲಾ ಕಾರ್ಯಕರ್ತರಿಗೆ ಸ್ನೇಹಿತರುಗಳಿಗೆ ಹೃದಯಪೂರ್ವಕ ಹೃತ್ಪೂರ್ವಕ ಧನ್ಯವಾದಗಳು ಎಂದು ಭಾವನಾತ್ಮಕವಾಗಿ ಮಾತನಾಡಿ ಕಾರುಣ್ಯಾಶ್ರಮದ ಸೇವೆಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತಪಡಿಸಿದರು. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮುಟ್ಟು ಬರ್ಸಿ ಅಧ್ಯಕ್ಷರು ಯುವ ಮೋರ್ಚಾ ಸಿಂಧನೂರು ನಗರ ಘಟಕ. ಲಕ್ಷ್ಮಣ ವಕೀಲರು ಜಿಲ್ಲಾ ಉಪಾಧ್ಯಕ್ಷರು ಬಿ.ಜೆ.ಪಿ. ಎಸ್. ಟಿ.ಮೋರ್ಚಾ. ದುರುಗೇಶ ವಕೀಲರು ಕಾರ್ಯದರ್ಶಿಗಳು ವಕೀಲರ ಸಂಘ ಸಿಂಧನೂರು. ಶರಣಬಸವ ಉಮಲೂಟಿ ವಕೀಲರು ಬಿಜೆಪಿ ರಾಜ್ಯ ವಕ್ತಾರರು ಬೆಂಗಳೂರು. ದೇವರಾಜ ಜಾಲವಾಡಗಿ ಬಿಜೆಪಿ ಯುವ ಮುಖಂಡರು.

ನಿರುಪಾದಿ ಮಾಜಿ ಅಧ್ಯಕ್ಷರು ನಗರ ಓಬಿಸಿ ಮೋರ್ಚಾ ಸಿಂಧನೂರು. ಶರಣಬಸವ ಪಾಟೀಲ್ ನಾಗರಬೆಂಚಿ ಪ್ರತಾಪ್ ಗೌಡ ಪಾಟೀಲ್ ಮಾಜಿ ಶಾಸಕರ ಆಪ್ತ ಸಹಾಯಕರು. ಹೊಸಗೇರಪ್ಪ ಗುಂಜಳ್ಳಿ ಯುವ ಮುಖಂಡರು ಬಿಜೆಪಿ. ಶಿವರಾಜ ತುರುವಿಹಾಳ ಬಿಜೆಪಿ ಯುವ ಮುಖಂಡರು. ನಿರುಪಾದಿ ಉಪ್ಪಲದೊಡ್ಡಿ. ಪ್ರಮೋದ್ ಗುಂಜಳ್ಳಿ, ವಕೀಲರು. ಸೋಮನಾಥ ಕಲ್ಲೂರು ಅಧ್ಯಕ್ಷರು ಒಬಿಸಿ ಗ್ರಾಮೀಣ ಮೋರ್ಚಾ ಸಿಂಧನೂರು. ಗಂಗಾಧರ ಸ್ವಾಮಿ ಕಂಬಾಳಿ ಮಠ ಪ್ರಧಾನ ಕಾರ್ಯದರ್ಶಿಗಳು ಬಿಜೆಪಿ ಯುವ ಮೋರ್ಚಾ ಮಸ್ಕಿ. ರಮೇಶ ಗಾಳಿ ಯುವ ಮೋರ್ಚಾ ಮುಖಂಡರು ಸಿಂಧನೂರು. ಮನೋಜ್ ಪ್ರಧಾನ ಕಾರ್ಯದರ್ಶಿಗಳು ಯುವ ಮೋರ್ಚಾ ಬಿಜೆಪಿ ಸಿಂಧನೂರು. ಹಾಗೂ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ. ಶ್ರೀಮಠ ಸೇವಾ ಟ್ರಸ್ಟ್ ನ ಸದಸ್ಯರಾದ ಸುಜಾತ ಹಿರೇಮಠ. ಆಶ್ರಮದ ಸಿಬ್ಬಂದಿಗಳಾದ ಸುಜಾತ ಮಲದಗುಡ್ಡ. ಸಿದ್ದಯ್ಯ ಸ್ವಾಮಿ. ಮರಿಯಪ್ಪ. ಜ್ಯೋತಿ. ಮತ್ತು ಸಿಂಧನೂರು ಹಾಗೂ ಮಸ್ಕಿ ವಿಧಾನಸಭಾ ಕ್ಷೇತ್ರದ ಪ್ರತಾಪ್ ಗೌಡ ಪಾಟೀಲ್ ಅಭಿಮಾನಿಗಳ ಸಂಘದ ಹಲವಾರು ಕಾರ್ಯಕರ್ತರುಗಳು ಮತ್ತು ಬಿಜೆಪಿ ಕಾರ್ಯಕರ್ತರುಗಳು ಉಪಸ್ಥಿತರಿದ್ದರು.

## ನೇಮಕಾತಿ ಪ್ರಕಟಣೆ

ಬಿಇಎಲ್ ನೇಮಕಾತಿ 2026–19 ಹಿರಿಯ ಸಹಾಯಕ ಎಂಜಿನಿಯರ್, ಚಾಲಕ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಬಿಇಎಲ್ ನೇಮಕಾತಿ 2026: 19 ಹಿರಿಯ ಸಹಾಯಕ ಎಂಜಿನಿಯರ್, ಚಾಲಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್ ಫೆಬ್ರವರಿ 2026 ರ ಬಿಇಎಲ್ ಅಧಿಕೃತ ಅಧಿಸೂಚನೆಯ ಮೂಲಕ ಹಿರಿಯ ಸಹಾಯಕ ಎಂಜಿನಿಯರ್, ಚಾಲಕ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಗಾಜಿಯಾಬಾದ್ – ಉತ್ತರ ಪ್ರದೇಶ, ಜೋಧ್‌ಪುರ–ರಾಜಸ್ಥಾನ, ಬಟಿಂಡಾ – ಪಂಜಾಬ್, ವಿಶಾಖಪಟ್ಟಣ–ಆಂಧ್ರಪ್ರದೇಶ, ಮುಂಬೈ – ಮಹಾರಾಷ್ಟ್ರ, ಕೋಲ್ಕತ್ತಾ–ಪಶ್ಚಿಮ ಬಂಗಾಳ, ಚೆನ್ನೈ–ತಮಿಳುನಾಡು ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 17–ಮಾರ್ಚ್–2026 ರಂದು ಅಥವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 23–02–2026 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 17–ಮಾರ್ಚ್–2026 ಅಧಿಕೃತ ವೆಬ್‌ಸೈಟ್: bel-india.in

# ಕರ್ನಾಟಕ ಪ್ರಾಂತ ರೈತ ಸಂಘ ಗ್ರಾಮ ಸಮಿತಿ ವತಿಯಿಂದ ಧರಣಿ

❑ ನೈಜ್ಯ ದೆಸೆ ನ್ಯೂಸ್

**ಜಾಲಹಳ್ಳಿ: ಫೆ 24 ರಂದು ದೇವದುರ್ಗ ತಾಲೂಕಿನ ಜಾಲಹಳ್ಳಿ ಗ್ರಾಮದಲ್ಲಿ, ಜಾಲಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಎದುರು ಭ್ರಷ್ಟಾಚಾರ ಮತ್ತು ನಿಯಮಬಾಹಿರ ನೇಮಕಾತಿ ವಿರುದ್ಧ ಧರಣಿ ನಡೆಸಲಾಯಿತು.**

ಕರ್ನಾಟಕ ಪ್ರಾಂತ ರೈತ ಸಂಘ ಗ್ರಾಮ ಸಮಿತಿ ಜಾಲಹಳ್ಳಿ ವತಿಯಿಂದ ಆಯೋಜಿಸಲಾದ ಈ ಪ್ರತಿಭಟನೆಯಲ್ಲಿ, ಕಳೆದ ಎರಡು ವರ್ಷಗಳಿಂದ ಸಹಕಾರ ಸಂಘದಲ್ಲಿ ನಿರಂತರ ಭ್ರಷ್ಟಾಚಾರ, ಸ್ವಜನ ಪಕ್ಷಪಾತ ಹಾಗೂ ಅಧಿಕಾರ ದುರುಪಯೋಗ ನಡೆಯುತ್ತಿದೆ ಎಂದು ಆರೋಪಿಸಲಾಯಿತು. ಇದರಿಂದ ರೈತರು ಹಾಗೂ ಸಣ್ಣ ವ್ಯಾಪಾರಸ್ಥರು ಆರ್ಥಿಕ ನಷ್ಟ ಅನುಭವಿಸುತ್ತಿದ್ದಾರೆ ಎಂದು ಪ್ರತಿಭಟನಾಕಾರರು ತಿಳಿಸಿದರು. ಸಹಕಾರಿ ಸಂಘವು ರೈತರ ಆರ್ಥಿಕ ಬೆನ್ನೆಲುಬಾಗಿರಬೇಕಾದ ಸಂಸ್ಥೆಯಾಗಿದ್ದರೂ, ಕೆಲ ಅಧಿಕಾರಿಗಳು ಮತ್ತು ಆಡಳಿತ ಮಂಡಳಿ ಸದಸ್ಯರು ಅದನ್ನು ವೈಯಕ್ತಿಕ ಲಾಭದ ಸಾಧನವಾಗಿ ಬಳಸಿಕೊಂಡಿದ್ದಾರೆ



### ಪ್ರಮುಖ ಬೇಡಿಕೆಗಳು

- ◆ಕಳೆದ ಎರಡು ವರ್ಷದ ಹಣಕಾಸು ವ್ಯವಹಾರಗಳ ಕುರಿತು ಸ್ವತಂತ್ರ ಮತ್ತು ನ್ಯಾಯಸಮ್ಮತ ತನಿಖೆ ನಡೆಸಬೇಕು.
- ◆ಕಾರ್ಯದರ್ಶಿ ನೇಮಕಾತಿಯನ್ನು ನಿಯಮಾನುಸಾರ ಮರುಪ್ರಕ್ರಿಯೆ ಮೂಲಕ ನಡೆಸಬೇಕು.
- ◆ ಭ್ರಷ್ಟಾಚಾರದಲ್ಲಿ ಭಾಗಿಯಾದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು.
- ◆ರೈತರ ಹಣದ ಭದ್ರತೆಗೆ ವಿಶೇಷ ಮೇಲ್ವಿಚಾರಣ ಸಮಿತಿ ರಚಿಸಬೇಕು.
- ◆ಸಂಬಂಧಿಸಿದ ಮೇಲಾಧಿಕಾರಿಗಳ ಪಾತ್ರವನ್ನೂ ತನಿಖೆ ವ್ಯಾಪ್ತಿಗೆ ಒಳಪಡಿಸಬೇಕು.

ಎಂಬ ಆರೋಪ ಕೇಳಿಬಂದಿದೆ.


ಕಾರ್ಯದರ್ಶಿ ನೇಮಕಾತಿಯಲ್ಲಿ ಸಹಕಾರಿ ನಿಯಮಾವಳಿ ಮತ್ತು ಸರ್ಕಾರದ ಮಾರ್ಗಸೂಚಿಗಳನ್ನು ಬಹಿರಂಗವಾಗಿ ಉಲ್ಲಂಘಿಸಲಾಗಿದೆ ಎಂದು ಸಂಘದ ಜಿಲ್ಲಾ ಕಾರ್ಯದರ್ಶಿ ನರಸಣ್ಣ ನಾಯಕ್ ಆರೋಪಿಸಿದರು. ಪಾರದರ್ಶಕತೆ ಹಾಗೂ ಮೀಸಲಾತಿ ನಿಯಮಗಳನ್ನು ಕಡೆಗಣಿಸಿ ನೇಮಕಾತಿ ಪ್ರಕ್ರಿಯೆ ನಡೆಸಲಾಗಿದೆ ಎಂದು ಅವರು ಹೇಳಿದರು. ಬ್ಯಾಂಕ್ ಖಾತೆಗಳ ಹಣಕಾಸು ವ್ಯವಹಾರಗಳಲ್ಲಿ ಗಂಭೀರ ಅನುಮಾನಗಳಿದ್ದರೂ ಸಮಗ್ರ ತನಿಖೆಗೆ ಮೇಲಾಧಿಕಾರಿಗಳು ಹಿಂದೇಟು ಹಾಕುತ್ತಿದ್ದಾರೆ ಎಂದು ಚಂದಪ್ಪ ಬುದ್ದಿನ್ನಿ ಹೊಸೂರು ಆರೋಪಿಸಿದರು. ಈ ಸಂದರ್ಭದಲ್ಲಿ ಅಖಖಿಗ ಮುಖಂಡ ಗಿರಿಯಪ್ಪ ಪೂಜಾರಿ ಮಾತನಾಡಿದರು.

ಕರ್ನಾಟಕ ಪ್ರಾಂತ ರೈತ ಸಂಘ ಜಾಲಹಳ್ಳಿ ಗ್ರಾಮ ಸಮಿತಿ ಅಧ್ಯಕ್ಷ ಹನುಮಂತಪ್ಪ ಮಡಿವಾಳ ಸ್ವಾಗತಿಸಿದರು. ಧರಣಿಯಲ್ಲಿ ವಿವಿಧ ಗ್ರಾಮ ಸಮಿತಿಗಳ ಪದಾಧಿಕಾರಿಗಳು, ಪಂಚಾಯತ್ ಸದಸ್ಯರು, ತಿಮ್ಮಣ್ಣ ದಿವಾನ್, ಮಕ್ತುಮ್ ಪರಾಶಿ, ಸ್ಥಳೀಯ ಮುಖಂಡ ಚಂದಪ್ಪ ಬುದ್ದಿನ್ನಿ, ಡಿವೈಎಫ್ಐ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ರೈತ ಮತ್ತು ಕಾರ್ಮಿಕ ಸಂಘದ ಮುಖಂಡ ಶಬ್ಬೀರ್ ಜಾಲಹಳ್ಳಿ ಸೇರಿದಂತೆ ರಂಗನಾಥ್ ಬುಂಕಲ್ದೊಡ್ಡಿ ಮೌನೇಶ್ ದಾಸರ್, ರಾಜು ನಾಯಕ್, ಕಲಿಮುದ್ದಾರ್, ದುರ್ಗಪ್ಪ ಹೊರಟಿ ಬಸವರಾಜ್ ವಂದಲಿ, ಹನುಮಂತ ಮಂಡಲಗುಡ್ಡ, ಮಲ್ಲಪ್ಪ ಗಾಜಿಲ್ದಿನ್ನಿ ಅನೇಕ ಸಾರ್ವಜನಿಕರು ಭಾಗವಹಿಸಿದರು. ವರದಿ: ಖಾಜಾಹುಸೇನ್ ಬಾಬಾ, ಜಾಲಹಳ್ಳಿ

## ಅ. ಕ. ವಿ. ಮ.ಜಿಲ್ಲಾ ಯುವ ಘಟಕ ಗೌರವ ಅಧ್ಯಕ್ಷರಾಗಿ ಬ್ರಹ್ಮಯ್ಯ ಆಚಾರಿ ಆಯ್ಕೆ

❑ ನೈಜ್ಯ ದೆಸೆ ನ್ಯೂಸ್

**ಸಮಾಜದ ಧೀಮಂತ ನಾಯಕರು,ಹೋರಾಟಗಾರರು, ಸಮಾಜ ಸಂಘಟನೆಗೆ ಹಗಲಿರುಳು ಶ್ರಮಿಸುತ್ತಿರುವ ಮಾಜಿ ವಿಧಾನ ಪರಿಷತ್ ಸದಸ್ಯರು,ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾ ರಾಜ್ಯಾಧ್ಯಕ್ಷರಾದ ಸನ್ಮಾನ್ಯ ಶ್ರೀ ಕೆ.ಪಿ. ನಂಜುಂಡಿ ಸರ್ ಅವರ ಆದೇಶದ ಮೇರೆಗೆ ಅ.ಕ.ವಿ.ಮ ರಾಜ್ಯ ಪ್ರ.ಕಾರ್ಯದರ್ಶಿ ಬ್ರಹ್ಮಗಣೇಶ ವಕೀಲರು ,ರಾಜ್ಯ ಕಾರ್ಯದರ್ಶಿ ಸೋಮಣ್ಣ ಸುಕಲಪೇಟೆ,**



ಅ. ಕ. ವಿ. ಮ. ಜಿಲ್ಲಾಧ್ಯಕ್ಷರಾದ ಮಾರುತಿ ಬಡಿಗೇರ್ ಹಾಗೂ ರಾಯಚೂರು ಜಿಲ್ಲಾ ವಿಶ್ವಕರ್ಮ ಸಮಾಜ (ರಿ) ರಾಯಚೂರು ಜಿಲ್ಲಾಧ್ಯಕ್ಷರಾದ ಉದಯಕುಮಾರ ಪತ್ತಾರ ಹಾಗೂ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಮು ಕೆ.ಗಾಣದಾಳ ಅವರ ಸೂಚನೆ ಮೇರೆಗೆ ಅ.ಕ.ವಿ.ಮ.ಯುವ ಘಟಕದ ಜಿಲ್ಲಾಧ್ಯಕ್ಷರಾದ ಸುರೇಶ ಸಂಗಾಪುರ ಇವರ ಅಧ್ಯಕ್ಷತೆಯ ಸಮ್ಮುಖದಲ್ಲಿ ಮಾನ್ವಿಯ ಶಿವರಾಜ್ ಮದ್ಲಾಪುರ ಮಾರಿಕಾಂಬ ಹಾರ್ಡ್ವೇರ್ ನಲ್ಲಿ ರಾಯಚೂರು ಜಿಲ್ಲೆಯಲ್ಲಿ ವಿಶ್ವಕರ್ಮ ಸಮಾಜ ಸಂಘಟನೆಯನ್ನು ಬಲಪಡಿಸುವ ಉದ್ದೇಶದಿಂದ ದಿನಾಂಕ 22.02.2026 ರವಿವಾರದಂದು ನಡೆದ ಪೂರ್ವಭಾವಿ ಸಭೆಯಲ್ಲಿ ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾ ಜಿಲ್ಲಾ ಯುವ ಘಟಕ ಗೌರವ ಅಧ್ಯಕ್ಷರಾಗಿ ಬ್ರಹ್ಮಯ್ಯ ಆಚಾರಿ ತಂದೆ ಪಂಪಣ್ಣ ಆಚಾರಿ ಶಿಲ್ಪಿಗಳು ರಾಜ್ಯ ಪ್ರಶಸ್ತಿ ಪುರಸ್ಕೃತರು ಸಂಗಾಪುರ ಅವರನ್ನು ಎಲ್ಲರ ಒಪ್ಪಿಗೆಯ ಮೇರೆಗೆ ಆಯ್ಕೆ ಮಾಡಲಾಯಿತು. *ಶ್ರೀ ಯುತ ಬ್ರಹ್ಮಯ್ಯ ಶಿಲ್ಪಿ ಸಂಗಾಪುರ ಅವರಿಗೆ ಹೃದಯ ಪೂರ್ವಕ ಅಭಿನಂದನೆಗಳು

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಸಹಾಯಕ ನಿರ್ದೇಶಕ ಡಾ.ಬೆಳಗಲ್ಲ ಗೆ ಗೌರವ ಸಮರ್ಪಣೆ



❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಪಟ್ಟಣದ ಶ್ರೀ ಸಂಗಮೇಶ್ವರ ಸಭಾ ಭವನದಲ್ಲಿ ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹ ಶಿಕ್ಷಕರ ಸಂಘ ತಾಳಿಕೋಟಿ ತಾಲೂಕ ಘಟಕದ ಸಹಯೋಗದಲ್ಲಿ ಹಮ್ಮಿಕೊಂಡ 2025–26 ನೇ ಸಾಲಿನ ಎಸ್ ಎಸ್ ಎಲ್ ಸಿ ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶ ಸುಧಾರಣೆಗಾಗಿ ಉಪನ್ಯಾಸ, ರಸಪ್ರಶ್ನೆ ಹಾಗೂ ವಯೋನಿವೃತ್ತಿ ಹೊಂದಿದ ಪ್ರೌಢಶಾಲಾ ಶಿಕ್ಷಕರ ಸನ್ಮಾನ ಸಮಾರಂಭದಲ್ಲಿ ಮುದ್ದೇಬಿಹಾಳ ಎಂ.ಡಿ.ಎಂ. ಸಹಾಯಕ ನಿರ್ದೇಶಕ ಡಾ.ಎಂ.ಎಂ.ಬೆಳಗಲ್ಲ ಇವರನ್ನು ಗೌರವಿಸಿ ಸನ್ಮಾನಿಸಲಾಯಿತು.**

ಈ ಸಮಯದಲ್ಲಿ ತಹಸಿಲ್ದಾರ್ ಡಾ.ವಿನಯಾ ಹೂಗಾರ, ಖ್ಯಾತ ನೇತ್ರ ತಜ್ಞ ಡಾ.ಪ್ರಭುಗೌಡ ಲಿಂಗದಳ್ಳಿ, ಬಿಇಓ ಬಿ.ಎಸ್.ಸಾವಳಗಿ, ಉಪನ್ಯಾಸಕ ಮುಜಾವರ, ಸಂಘದ ಜಿಲ್ಲಾ ಅಧ್ಯಕ್ಷ ಶಿವರಾಜ ಬಿರಾದಾರ, ತಾಲೂಕ ಅಧ್ಯಕ್ಷ ವೈ ಬಿ ಬಡಿಗೇರ, ಎಸ್ಎಸ್ ವಿದ್ಯಾ ಸಂಸ್ಥೆ ಅಧ್ಯಕ್ಷ ಎಚ್ ಎಸ್ ಪಾಟೀಲ, ಇಸಿಓ ಆರ್.ಬಿ.ದಮ್ಮೂರಮಠ, ಶಿಕ್ಷಕಿ ಸುವರ್ಣಾ ಗದುಗಿನಮಠ,ಉದ್ಯಮಿ ಪರಶುರಾಮ ಹಂಚಾಟೆ, ಡಾ.ಅನೀಲಕುಮಾರ ಇರಾಜ,ಬಿ.ಐ.ಹಿರೇಹೊಳಿ, ಸಚೀನ ಹಂಚಾಟೆ, ಎನ್.ಬಿ. ಪಿಂಜಾರ,ಕ.ರಾ.ಸ.ನೌ.ಸಂ. ತಾಲೂಕಾಧ್ಯಕ್ಷ ಎಸ್.ಬಿ.ಚೌದ್ರಿ,ನೋಡಲ್ ಅಧಿಕಾರಿ ಎಂ.ಕೆ.ಬಾಗವಾನ, ಶಿಕ್ಷಕಿ ಆರ್.ಜಿ. ದೇಸಾಯಿ, ಒಡೆಯರ್,ಸಹ ಶಿಕ್ಷಕ ಅರ್ಜುನ ಮಲ್ಲೇವಾಡಿ, ಸಂತೋಷ ಕದಂ, ಬಾಪುಗೌಡ ಪಾಟೀಲ, ಸಿಆರ್ಸಿ ರಾಜು ವಿಜಾಪುರ, ಪ್ರೌಢಶಾಲಾ ಶಿಕ್ಷಕರ ಸಂಘ ತಾಲೂಕ ಘಟಕದ ಪದಾಧಿಕಾ–ರಿ,ನಾಮ ನಿರ್ದೇಶಿತ ಪದಾಧಿಕಾರಿಗಳು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಇದ್ದರು.

## ದೈಹಿಕ, ಮಾನಸಿಕ ಸದೃಢತೆಗೆ ನೌಕರರಿಗೆ ಕ್ರೀಡೆಗಳು ಅತ್ಯಗತ್ಯ: ಸಿಇಓ ಈಶ್ವರ ಕುಮಾರ್ ಕಾಂದೂ ಸಲಹೆ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಸಾರ್ವಜನಿಕ ಸೇವೆಯಲ್ಲಿ ತೊಡಗಿರುವ ಸರ್ಕಾರಿ ನೌಕರರು ಕೆಲಸ ಮಧ್ಯೆಯೇ ಕ್ರೀಡಾಚಟುಟಿ–ಕೆಗಳಲ್ಲಿ ಭಾಗವಹಿಸಿ, ಮಾನಸಿಕ ಮತ್ತು ದೈಹಿಕ ಸದೃಢತೆ ಸಾಧಿಸಬೇಕೆಂದು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ ಅವರು ಸಲಹೆ ನೀಡಿದರು.**

ಫೆ.24ರ ಮಂಗಳವಾರ ದಂದು ನಗರದ ಕೃಷಿ ವಿಶ್ವವಿದ್ಯಾಲಯ ಕ್ರೀಡಾಂಗಣದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ಯುವಜನಸೇವಾ ಮತ್ತು ಕ್ರೀಡಾ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಿದ್ದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳ ಕ್ರೀಡಾ ಮತ್ತು ಸಾಂಸ್ಕೃತಿಕ ಉತ್ಸವಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಕ್ರೀಡೆಯಲ್ಲಿ ಸೋಲು–ಗೆಲುವು ಸಹಜ. ಪ್ರತಿಯೊಬ್ಬರು ಕ್ರೀಡಾ ಮನೋಭಾವನೆಯೊಂದಿಗೆ ಸ್ಪರ್ಧೆಗಳಲ್ಲಿ ಭಾಗವಹಿಸಬೇಕು. ಬದಲಾದ ಜೀವನ ಶೈಲಿ ಮತ್ತು ಆಹಾರ ಕ್ರಮಗಳಿಂದ ಒತ್ತಡ ಉಂಟಾಗುವುದು ಸಾಮಾನ್ಯವಾಗಿದೆ.

ಹೀಗಾಗಿ ಪ್ರತಿ ನಿತ್ಯ ಕ್ರೀಡಾ ಚಟುವಟಿ–ಕೆಗಳಲ್ಲಿ ತೊಡಗಿ ಆರೋಗ್ಯ ಕಾಪಾಡಿಕೊಳ್ಳಬೇಕು. ಹೀಗಾಗಿ ಎರಡು ದಿನಗಳ ಕಾಲ ಕ್ರೀಡಾ ಮತ್ತು ಸಾಂಸ್ಕೃತಿಕ ಕಾರ್ಯಕ್ರಮ ಏರ್ಪಡಿಸಲಾಗಿದೆ.



ಅವಕಾಶ ಸಿಕ್ಕಾಗ ಇದೆ ರೀತಿಯಲ್ಲಿ ಕ್ರೀಡೆಗಳನ್ನು ಏರ್ಪಡಿಸಿ, ನೌಕರರು ಮತ್ತು ಸಿಬ್ಬಂದಿಗಳನ್ನು ಪ್ರೋತ್ಸಾಹಿಸಲಾಗುವುದು ಎಂದರು. ಸರ್ಕಾರಿ ನೌಕರರು ಮುಖ್ಯವಾಗಿ ಜನಸಾಮಾನ್ಯರ ನಿರೀಕ್ಷೆಯಂತೆ ಕೆಲಸ ನಿರ್ವಹಿಸಬೇಕು. ಕುಟುಂಬ ನಿರ್ವಹಣೆ ಜೊತೆಗೆ ಸಾರ್ವಜನಿಕ ಸಮಸ್ಯೆಗಳಿಗೆ ಸ್ಪಂದಿಸಬೇಕು. ಪ್ರತಿಯೊಬ್ಬರು ವಾಟ್ಸಪ್, ಪೇಸಬುಕ್ ಮತ್ತು ಇನ್ನಿತರ ಸಾಮಾಜಿ–ಕ ಜಾಲತಾಣಗಳನ್ನು ಬಳಸುತ್ತಿದ್ದು, ಅಧಿಕಾ–ರಿಗಳು ಮತ್ತು ಸಿಬ್ಬಂದಿ ವಾಟ್ಸಪ್ ಮತ್ತು ಇನ್ನಿತರ ಸಾಮಾಜಿಕ ಜಾಲತಾಣಗಳನ್ನು ಬಳಸಬೇಕು.

ವಾಟ್ಸಪ್ ಮತ್ತು ಇನ್ನೀತರೆ ಸಾಮಾಜಿ–ಕ ಜಾಲತಾಣ ಬಳಸುವಾಗ ಎಚ್ಚರಿಕೆ ವಹಿಸಬೇಕು. ಸರ್ಕಾರಿ ಅಧಿಕಾರಿಗಳು, ನೌಕರರು ಕಾಲಕ್ಕೆ ತಕ್ಕಂತೆ ಕಾರ್ಯ ಶೈಲಿಯನ್ನು ಮಾರ್ಪಾಡು ಮಾಡಿಕೊಳ್ಳಬೇಕು ಎಂದು ಸಿಇಓ ಅವರು ಮಹತ್ವ ಸಲಹೆ ನೀಡಿದರು. ಈ ವೇಳೆ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಕಲಬುರಗಿ ವಿಭಾಗೀಯ ಉಪಾಧ್ಯಕ್ಷರು ಮತ್ತು ರಾಯಚೂರು ಜಿಲ್ಲಾ ಘಟಕದ ಅಧ್ಯಕ್ಷರಾದ ಕೃಷ್ಣ ಶಾವಂತಗೇರಿ ಅವರು ಮಾತನಾಡಿ, ಸರ್ಕಾರಿ ನೌಕರರು ಒಂದು ಕುಟುಂಬದಿಂದ ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸಬೇಕು. ರಾಜ್ಯಾದ್ಯಂತ ನೌಕರರಿಗಾಗಿಯೇ ಕ್ರೀಡಾಕೂಟಗಳನ್ನು ಏರ್ಪಡಿಸಿ ನೌಕರರು ಪ್ರತಿ ನಿತ್ಯದ ಜಂಜಾಟಗಳಿಂದ ಹೊರಬರುವಂತೆ ಮಾಡಲಾಗುತ್ತಿದೆ. ಸದಾ ಒತ್ತಡದಲ್ಲಿ ಕಾರ್ಯ ನಿರ್ವಹಿಸುವ ನೌಕರರು ಇಂಥ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಉತ್ಸವಗಳಲ್ಲಿ ಭಾಗವಹಿಸಿದಾಗ ಹೊಸ ಉಲ್ಲಾಸ ಮೂಡುತ್ತದೆ ಎಂದರು. ಇದಕ್ಕೂ ಮುಂಚೆ ಕ್ರೀಡಾಕೂಟಕ್ಕೆ ಧ್ವಜಾರೋಹಣ, ಕ್ರೀಡಾ ಜ್ಯೋತಿ ಸ್ವೀಕರಿಸುವುದರ ಮೂಲಕ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕ್ರೀಡಾಕೂಟಕ್ಕೆ ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಗಳಾದ ಹಾಲಸಿದ್ದಪ್ಪ ಪೂಜೇರಿ,

ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ಶರಣಬಸವರಾಜ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿಗಳಾದ ಡಾ.ಟಿ.ರೋಣಿ, ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿಗಳಾದ ವಿಜಯಶಂಕರ, ರಾಯಚೂರು ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ ಚಂದ್ರಶೇಖರ ಪವಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿಗಳಾದ ಡಾ.ಸುರೇಂದ್ರ ಬಾಬು, ಆಯುಷ್ ಇಲಾಖೆಯ ಡಾ.ಶಂಕರಗೌಡ, ಯುವಜನಸೇವಾ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಈರೇಶ ನಾಯಕ ಸೇರಿದಂತೆ ವಿವಿಧ ತಾಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾ–ರಿಗಳು, ಸಹಾಯಕ ನಿರ್ದೇಶಕರು, ವಿವಿಧ ಇಲಾಖೆಗಳ ಅಧಿಕಾಗಳು ಉಪಸ್ಥಿತರಿದ್ದರು.

# ಶಿಕ್ಷಣ ಬದಕನ್ನು ರೂಪಿಸುತ್ತದೆ :ಶೇಖರಯ್ಯ

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ನಗರದ ಸತ್ಯ ಗಾರ್ಡನ್ನಲ್ಲಿ ನಡೆದ ಎಲ್ ಬಿ ಕೆ ಮತ್ತು ನೊಬಲ್ ಪದವಿ ಮಹಾವಿದ್ಯಾಲಯದಿಂದ, ದ್ವಿತೀಯ ಪಿಯುಸಿ ಮತ್ತು ಬಿಎ, ಬಿಕಾಂ ವಿದ್ಯಾರ್ಥಿಗಳಿಗೆ ಬಿಳ್ಕೊಡುಗೆ ಹಾಗೂ ವಾರ್ಷಿಕ ಸ್ನೇಹ ಸಮ್ಮೇಳನ ಕಾರ್ಯಕ್ರಮದಲ್ಲಿ ಶ್ರೀ ಶೇಖರಯ್ಯ ಪ್ರಾಚಾರ್ಯರು ಬಾಲಕರ ಸರಕಾರಿ ಪದವಿ ಪೂರ್ವ ಕಾಲೇಜು ಸಿಂಧನೂರು, ಇವರು ಮುಖ್ಯ ಅತಿಥಿಗಳಾಗಿ ಮಾತನಾಡುತ್ತಾ, ವಿದ್ಯಾರ್ಥಿಯ ಜೀವನದಲ್ಲಿ ಪರೀಕ್ಷೆಯು ಸಂಕ್ರಮಣ ಇದ್ದಹಾಗೆ ಸೂರ್ಯ ತನ ದಿಕ್ಕನ್ನು ಬದಲಾಯಿಸುವ ಹಾಗೆ ವಿದ್ಯಾರ್ಥಿಯು ತನ್ನ ಭವಿಷ್ಯವನ್ನು ರೂಪಿಸಿಕೊಳ್ಳಲು ಪರೀಕ್ಷೆಯ ಫಲಿತಾಂಶ ಮಹತ್ವವಾದದ್ದು.**

ಕಾಲೇಜಿನಲ್ಲಿ ಪಡೆದ ಶಿಕ್ಷಣ ಬದುಕನ್ನು ಬದಲಾಯಿಸುವ ಶಕ್ತಿಯನ್ನು ಹೊಂದಿದೆ. ನಿಮ್ಮ ಜೀವನವನ್ನು ರೂಪಿಸುವುದು ಶಿಕ್ಷಣದಿಂದ ಮಾತ್ರ .ವಿದ್ಯಾರ್ಥಿಗಳ ಸಾಧನೆ ಕುಟುಂಬದವರಿಗೂ, ಕಾಲೇಜಿಗೂ ಹೆಸರನ್ನು ಕೀರ್ತಿಯನ್ನು ತರುತ್ತದೆ. ಹಾಗಾಗಿ ಎಲ್ಲಾ ವಿದ್ಯಾರ್ಥಿಗಳು ಉತ್ತಮವಾಗಿ ಓದಿ ಉತ್ತಮ ದರ್ಜೆಯಲ್ಲಿ ಉತ್ತೀರ್ಣಗೊಳ್ಳಿ ನಿಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಿ ಎಂದು ತಿಳಿಸಿದರು. ಹಾಗೆಯೇ ಶಿಕ್ಷಣ ಸಂಸ್ಥೆಗಳ ಪಾತ್ರ ಪ್ರಮುಖವಾದದ್ದು ಸಂಸ್ಥೆಗಳು ಉಪನ್ಯಾಸಕ–



ರಿಗೆ ಜೀವನವನ್ನು ನೀಡುತ್ತದೆ .ಇದೇ ರೀತಿಯಾಗಿ ಶಿಕ್ಷಣ ಸಂಸ್ಥೆಗಳು ಜೀವನವನ್ನು ರೂಪಿಸುವ ಕೆಲಸವನ್ನು ಮಾಡಲಿ ಎಂದು ತಿಳಿಸಿದರು. ಶ್ರೀಮತಿ ಗಿರಿಜಾ ಮುಖ್ಯ ಗುರುಗಳು ಸರಕಾರಿ ಪ್ರೌಢಶಾಲೆ ಪಗಡದಿನ್ನಿ ಇವರು ಮಾತನಾಡುತ್ತಾ, ವಿದ್ಯಾರ್ಥಿ ಜೀವನ ಬಂಗಾರದ ಬದುಕಿದ್ದ ಹಾಗೆ ಇರುವ ಕ್ಷಣವನು ಆನಂದಿಸಿ ,ನೆನಪುಗಳನ್ನು ಕಲೆ ಹಾಕಿಕೊಳ್ಳುವಂತಹ ಒಂದು ಸುಂದರವಾದ ವೇದಿಕೆಯಾಗಿದೆ. ಪದವಿ ಮುಗಿದ ನಂತರ ವಿದ್ಯಾರ್ಥಿಗಳಿಗೆ ಮುಂದೆ ಏನು ಎನ್ನುವಂತಹ ಪ್ರಶ್ನೆಗಳು ಬರುತ್ತವೆ.

ಶಿಕ್ಷಕರಿಗೆ ನಿಮ್ಮ ಶಿಕ್ಷಣ ಸಂಸ್ಥೆಗಳಿಗೆ ನೀವು ಕೊಡುವ ಕೊಡುಗೆ ಎಂದರೆ ನಿಮ್ಮ ಶೈಕ್ಷಣಿಕ ಸಾಧನೆ ಮಾತ್ರ. ನಿಮ್ಮ ಜವಾಬ್ದಾರಿಯನ್ನು ತಿಳಿದುಕೊಂಡು ದೇಶದ ಅಭಿವೃದ್ಧಿಯಲ್ಲಿ ನಿಮ್ಮ ಪಾಲನ್ನು ನೀಡಬೇಕು .ವಿಶ್ವಕ್ಕೆ ಜ್ಯೋತಿ ಆಗಿರುವ ಬಸವ ಚಾರಿ ಟೇಬಲ್ ಟ್ರಸ್ಟ್ ನಲ್ಲಿ ಕಲಿತಿದ್ದೀರ ಅಂದರೆ ನಿಮ್ಮೆಲ್ಲರಿಗೂ ಸರಿಯಾದ ಸಂಸ್ಕಾರವನ್ನು ಕಲಿಸುತ್ತದೆ .ಸಂಸ್ಕಾರವನ್ನು ಪಡೆದುಕೊಂಡು ಸಮಾಜಕ್ಕೆ ಮಾದರಿಯಾಗಿ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ರಾಯಚೂರಿನ ಡಯಟ್ ಯರಮರಸ್ ನ ಉಪನ್ಯಾಸಕರಾದ ಕನಕಪ್ಪ ಚಿಕ್ಕಬೇರ್ಗಿ ಅವರು ಮಾತನಾಡಿ ,ನಮಗೆ ಧೈರ್ಯವಾಗಿ ಒಂದು ವೇದಿಕೆಯ ಮೇಲೆ ಮೊದಲು ಮಾತನಾಡಲು ಎಲ್ಲಿಯೂ ಅವಕಾಶ ಸಿಕ್ಕಿದ್ದಿಲ್ಲ, ಅಂತಹ ಅವಕಾಶ ನಿಮಗೆ ದೊರೆತಿದೆ.

ಮನೆ ಪರಿಸ್ಥಿತಿಯನ್ನು ಅರಿತುಕೊಂಡು ಗುರಿಯನ್ನು ಮುಟ್ಟುವುದರಲ್ಲಿ ಯಶಸ್ಸನ್ನು ಪಡೆಯಬೇಕು ಇಂದಿನ ವಿಜ್ಞಾನ ಮತ್ತುತಂತ್ರಜ್ಞಾನವನ್ನು ಸರಿಯಾದ ರೀತಿಯಲ್ಲಿ ಬಳಸಿಕೊಂಡು ನಿಮ್ಮ ಗು–ರಿಯನ್ನು ಮುಟ್ಟಿ ಭವಿಷ್ಯವನ್ನು ರೂಪಿಸಿಕೊಳ್ಳಿ ಎಂದು ತಿಳಿಸಿದರು. ಅದೇ ರೀತಿಯಾಗಿ ವೀರೇಶ ಹೂಗಾರ, ನಾಗಭೂಷಣ ನವಲಿ , ಅವರು ವಿದ್ಯಾರ್ಥಿಗಳಿಗೆ ಹಿತನುಡಿಗಳನ್ನು ನುಡಿದರು. ಅಂತಿಮ ವರ್ಷದ ಪದವಿಪೂರ್ವ ಹಾಗೂ ಪದವಿ ವಿದ್ಯಾರ್ಥಿಗಳು ಕಾಲೇಜಿನಲ್ಲಿ ಕಳೆದ ಕ್ಷಣಗಳು, ಆಟ ಪಾಠಗಳು, ಸ್ನೇಹಿತರು ಹಾಗೂ ಉಪನ್ಯಾಸಕರ ಕುರಿತು ಬಸವರಾಜೇಶ್ವರಿ ಅಕ್ಕಮಹಾದೇವಿ ಕೀರ್ತಿ ಸಂಗೀತ ವಿಶ್ವ ವೀರೇಶ ಬಸಮ್ಮ ಇನ್ನಿತರ ವಿದ್ಯಾರ್ಥಿಗಳು ತಮ್ಮ ಅನಿಸಿಕೆಯನ್ನು ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ನೊಬಲ್ ಪದವಿ ಮಹಾವಿದ್ಯಾಲಯದಲ್ಲಿ "ಇತಿಹಾಸ ಸಾಮ್ರಾಜ್ಯಗಳ ದರ್ಶನ "ಎನ್ನುವಂತಹ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು, ಅದರ ಫಲಿತಾಂಶವನ್ನು ಈ ಕಾರ್ಯಕ್ರಮದಲ್ಲಿ ಪ್ರಸ್ತುತಪಡಿಸಲಾಯಿತು ಮೊದಲನೇ ಬಹುಮಾನ ನಟರಾಜ ತಂಡ ,ಎರಡನೆಯ ಬಹುಮಾನ ಶಿವಾಜಿ ಛತ್ರಪತಿ ತಂಡ ,ಮೂರನೇ ಬಹುಮಾನ ಸುವರ್ಣ ಯುಗ ತಂಡಕ್ಕೆ ಟ್ರೋಫಿ ಹಾಗೂ ನಗದು ಬಹುಮಾನ ನೀಡಿ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಈ ಕಾರ್ಯಕ್ರಮದ ಯಶಸ್ವಿಗೆ ಕಾರಣರಾದ ನೊಬೆಲ್ ಪದವಿ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಐಶ್ವರ್ಯ ದಳವಾಯಿ ಹಾಗೂ ಇತಿಹಾಸ ಉಪನ್ಯಾಸಕರಾದ ಶ್ರೀ ಪಂಚಾಕ್ಷರಿ ಮತ್ತು ಶ್ರೀ ಮೌಲ ಸಾಬ ಅವರಿಗೆ ಸನ್ಮಾನವನ್ನು ಮಾಡಲಾಯಿತು. ಹಾಗೆ ಕ್ರೀಡೆಯಲ್ಲಿ ಪಾಲ್ಗೊಂಡು ಬಹುಮಾನವನ್ನು ಪಡೆದುಕೊಂಡಂತಹ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು.

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀ ಶರಣಪ್ಪ ತೆಂಗಿನಕಾಯಿ ಬಸವ ಚಾ–ರಿಟೇಬಲ್ ಟ್ರಸ್ಟ್ ರವರು ವಹಿಸಿದ್ದರು. ಈ ಕಾರ್ಯಕ್ರಮದಲ್ಲಿ ಶ್ರೀ ಪರಶುರಾಮ್ ಮಲ್ಲಾಪುರ ಅವರು ಪ್ರಾಸ್ತಾವಿಕ ನುಡಿಗಳನ್ನು ಹಾಡಿದರು. ಕಾಲೇಜಿನ ಕಾರ್ಯದರ್ಶಿಗಳಾದ ಡಾ. ಅರುಣ–ಕುಮಾರ ಬೆರಗಿ ,ಉಪಾಧ್ಯಕ್ಷರಾದ ಶಂಕರಪ್ಪ ಪತ್ತಾರ ,ಖಜಾಂಚಿಗಳಾದ ಜಯಪ್ಪ ಗೊರಬಾಳ ,ಪ್ರಾಂಶುಪಾಲರಾದ ಐಶ್ವರ್ಯ ದಳವಾಯಿ, ಪ್ರಾಚಾರ್ಯರಾದ ಶಿವಕುಮಾರ ಬಿಂಗಿ ಹಾಗೂ ಕಾಲೇಜಿನ ಎಲ್ಲಾ ಉಪನ್ಯಾಸಕರು ,ಸಿಬ್ಬಂದಿ ವರ್ಗದವರು ಉಪಸ್ಥಿತಿಯಲ್ಲಿ ಇದ್ದರು. ಕಾರ್ಯಕ್ರಮದ ನಿರೂಪಣೆಯನ್ನು ಕುಮಾರಿ ಕಾವೇರಿ ನಿರೂಪಿಸಿದರು. ಶ್ರೀ ಪಂಪಾಪತಿ ಸ್ವಾಗತಿಸಿದರು .ಕುಮಾರಿ ಅನ್ನಪೂರ್ಣ ಅವರು ವಂದಿಸಿದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### MVSc ಸ್ತ್ರೀರೋಗ ಶಾಸ್ತ್ರ ಮತ್ತು ಪ್ರಸೂತಿಶಾಸ್ತ್ರ

MVSc ಸ್ತ್ರೀರೋಗ ಶಾಸ್ತ್ರ ಮತ್ತು ಪ್ರಸೂತಿಶಾಸ್ತ್ರದ ಪೂರ್ಣಗೊಂಡ ನಂತರ, ಅಭ್ಯರ್ಥಿಗಳು ಪಶುವೈದ್ಯಕೀಯ ಸ್ತ್ರೀರೋಗತಜ್ಞ, ಪಶುವೈದ್ಯಕೀಯ ಪ್ರಸೂತಿ ತಜ್ಞರು, ಭ್ರೂಣಶಾಸ್ತ್ರಜ್ಞ, ಸಂತಾನೋತ್ಪತ್ತಿ ರೋಗಶಾಸ್ತ್ರಜ್ಞ, ಸಂಶೋಧನಾ ವಿಜ್ಞಾನಿ, ಶಿಕ್ಷಣತಜ್ಞ/ಪ್ರಾಧ್ಯಾಪಕ, ಜಾನುವಾರು ಕಾನ್ಸುಲ್ ಪ್ರಾಣಿ ಆರೋಗ್ಯ ಅಧಿಕಾರಿಯಾಗಿ ಕೆಲಸ ಮಾಡಲು ಅವಕಾಶ ಪಡೆಯುತ್ತಾರೆ. ಈ ಪದವೀಧರರಿಗೆ ಉನ್ನತ ನೇಮಕಾತಿದಾರರು ಭಾರತೀಯ ಕೃಷಿ ಸಂಶೋಧನಾ ಮಂಡಳಿ (ICAR), ರಾಜ್ಯ ಪಶುವೈದ್ಯಕೀಯ ಇಲಾಖೆಗಳು, ಪಶುವೈದ್ಯಕೀಯ ಆಸ್ಪತ್ರೆಗಳು ಮತ್ತು ಚಿಕಿತ್ಸಾಲಯಗಳು ಅಥವಾ ಜಾನುವಾರು ಅಭಿವೃದ್ಧಿ ಮಂಡಳಿಗಳು. (MVSc ಅನಿಮಲ್ ರಿಪ್ರೊಡಕ್ಷನ್, ಗೈನಕಾಲಜಿ ಮತ್ತು ಅಬ್‌ಸ್ಟೆಟ್ರಿಕ್ಸ್) ಒಗಿಖಿಛಿ ಅನಿಮಲ್ ರಿಪ್ರೊಡಕ್ಷನ್, ಗೈನಕಾಲಜಿ ಮತ್ತು ಅಬ್‌ಸ್ಟೆಟ್ರಿಕ್ಸ್ ಎಂಬುದು ಪಶುವೈದ್ಯಕೀಯ ವಿಜ್ಞಾನದಲ್ಲಿನ ಸ್ನಾತಕೋತ್ತರ ಪದವಿಯಾಗಿದೆ. ಸ್ನಾತಕೋತ್ತರ ಪದವಿ ಮಟ್ಟದಲ್ಲಿ ಸ್ತ್ರೀರೋಗ ಶಾಸ್ತ್ರ ಮತ್ತು ಪ್ರಸೂತಿ ಕೋರ್ಸ್‌ಗೆ ಅರ್ಜಿ ಸಲ್ಲಿಸಲು, ಅಭ್ಯರ್ಥಿಗಳು ಪಶುವೈದ್ಯಕೀಯ ವಿಜ್ಞಾನ ಮತ್ತು ಸಂಬಂಧಿತ ಕ್ಷೇತ್ರಗಳಲ್ಲಿ ತಮ್ಮ ಪದವಿಯನ್ನು ಪೂರ್ಣಗೊಳಿಸಬೇಕು. ಒಗಿಖಿಛಿ ಸ್ತ್ರೀರೋಗ ಶಾಸ್ತ್ರ ಮತ್ತು ಪ್ರಸೂತಿಶಾಸ್ತ್ರದ ಪಠ್ಯಕ್ರಮವು ಪ್ರಾಣಿ ಸಂತಾನೋತ್ಪತ್ತಿ ಶರೀರಶಾಸ್ತ್ರ, ಪಶುವೈದ್ಯಕೀಯ ಸ್ತ್ರೀರೋಗ ಶಾಸ್ತ್ರ, ಪಶುವೈದ್ಯಕೀಯ ಪ್ರಸೂತಿ, ಸಂತಾನೋತ್ಪತ್ತಿ ಅಂತಃಸ್ರಾವಶಾಸ್ತ್ರ, ಆಂಡ್ರಾಲಜಿ, ಕೃತಕ ಗರ್ಭಧಾರಣೆ ಮತ್ತು ಭ್ರೂಣ ವರ್ಗಾವಣೆ ತಂತ್ರಜ್ಞಾನದಂತಹ ವಿಷಯಗಳನ್ನು ಒಳಗೊಂಡಿದೆ. ಮುಖ್ಯ ವಿವರಗಳು (Key Details): ಕೋರ್ಸ್ ಅವಧಿ: 2 ವರ್ಷಗಳು (4 ಸೆಮಿಸ್ಟರ್‌ಗಳು). ಅರ್ಹತೆ (Eligibility): B.V.Sc & A.H. (Bachelor of Veterinary Science and Animal Husbandry) ಪದವಿ. ಪ್ರವೇಶ ಪರೀಕ್ಷೆ: ICAR AIEEA PG ಅಥವಾ ರಾಜ್ಯ ಪಶುವೈದ್ಯಕೀಯ ವಿಶ್ವವಿದ್ಯಾಲಯಗಳ ಪ್ರವೇಶ ಪರೀಕ್ಷೆ. ಕೋರ್ಸ್ ವಿಷಯಗಳು (Syllabus): ಪಶು ಸಂತಾನೋತ್ಪತ್ತಿ ಶರೀರಶಾಸ್ತ್ರ (Animal Reproduction Physiology). ಪಶುವೈದ್ಯಕೀಯ ಗೈನಕಾಲಜಿ (Veterinary Gynaecology). ಪಶುವೈದ್ಯಕೀಯ ಅಬ್‌ಸ್ಟೆಟ್ರಿಕ್ಸ್ (Veterinary Obstetrics). ಸಂತಾನೋತ್ಪತ್ತಿ ಅಂತಃಸ್ರಾವಶಾಸ್ತ್ರ (Reproductive Endocrinology). ಆಂಡ್ರಾಲಜಿ ಮತ್ತು ಕೃತಕ ಗರ್ಭಧಾರಣೆ (Andrology & Artificial Insemination). ಭ್ರೂಣ ವರ್ಗಾವಣೆ ತಂತ್ರಜ್ಞಾನ (Embryo Transfer Technology). ಉದ್ಯೋಗಾವಕಾಶಗಳು (Job Opportunities): ಸರ್ಕಾರಿ ಪಶುವೈದ್ಯಕೀಯ ಆಸ್ಪತ್ರೆಗಳು (Government Veterinary Hospitals). ಪಶುಸಂಗೋಪನಾ ಇಲಾಖೆಗಳು. ಖಾಸಗಿ ಪಶು ಫಾರ್ಮ್‌ಗಳು ಮತ್ತು ಬ್ರೀಡಿಂಗ್ ಸೆಂಟರ್‌ಗಳು. ಪಶುವೈದ್ಯಕೀಯ ಕಾಲೇಜುಗಳಲ್ಲಿ ಉಪನ್ಯಾಸಕರು.

## ಗ್ರಾಮೀಣ ಪ್ರದೇಶದಲ್ಲಿ ಫೆ.26ರಂದು ವಿದ್ಯುತ್ ವ್ಯತ್ಯಯ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಯ 33/11 ಕೆವಿ ಇಡಪನೂರು ವಿದ್ಯುತ್ ಉಪ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಫೆ.26ರ ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 04ಗಂಟೆವರೆಗೆ ಇಡಪನೂರು ಉಪ ಕೇಂದ್ರದ ವ್ಯಾಪ್ತಿಯಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಭೋವಿ ನಿಗಮದ ಫಲಾನುಭವಿಗಳ ಆಯ್ಕೆಗಾಗಿ ಎಲ್ಲ ಶಾಸಕರಿಗೂ ಪತ್ರ ಬರೆದು ಮನವಿ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ರಾಜ್ಯ ಭೋವಿ ನಿಗಮದ ವಿವಿಧ ಯೋಜನೆಗಳ ಫಲಾನುಭವಿಗಳ ಆಯ್ಕೆಯನ್ನು ಅಂತಿಮಗೊಳಿಸಿ ಕಳುಹಿಸುವಂತೆ ರಾಜ್ಯ ಎಲ್ಲ ವಿಧಾನಸಭಾ ಕ್ಷೇತ್ರಗಳ ಶಾಸಕರುಗಳಿಗೆ ತಾವು ಪತ್ರ ಬರೆದು ಮನವಿ ಮಾಡಲಾಗಿದೆ. ಫಲಾನುಭವಿಗಳ ಅಂತಿಮ ಆಯ್ಕೆಪಟ್ಟಿ ಪಡೆದು, ನಿಗಮದಲ್ಲಿ ಲಭ್ಯವಿರುವ ಅನುದಾನವನ್ನು ಕಾಲಮಿತಿಯೊಳಗೆ ಬಳಸಲು ಕ್ರಮವಹಿಸುವಂತೆ ನಿಗಮದ ಹಿರಿಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಲಾಗಿದೆ ಎಂದು ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಂ.ರಾಮಪ್ಪ ಅವರು ಹೇಳಿದರು.**

ಫೆ.24ರ ಮಂಗಳವಾರ ದಂದು ನಗರದ ಕೃಷಿ ವಿಶ್ವವಿದ್ಯಾಲಯದ ಅಂತಾರಾಷ್ಟ್ರೀಯ ಅತಿಥಿ ಗೃಹದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು. ಪ್ರತಿ ವರ್ಷ ಆಯವ್ಯಯ ಹಾಗೂ ವಿವಿಧ ಯೋಜನೆಗಳಡಿ ಸರ್ಕಾರದಿಂದ ಅನುದಾನ ನಿಗದಿಪಡಿಸಲಾಗುತ್ತಿದ್ದು 2025-26ನೇ ಸಾಲಿಗೆ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ರೂ.93.75 ಕೋಟಿ ರೂ. ಅನುದಾನ ನಿಗದಿಪಡಿಸಲಾಗಿದೆ. ಈ ಅನುದಾನದ ಪೈಕಿ ಈಗಾಗಲೇ ಬಿಡುಗಡೆಯಾದ 68.81 ಕೋಟಿ ರೂ. ಅನುದಾನವು ಸಂಪೂರ್ಣ ಬಳಕೆಯಾಗಿದೆ ಎಂದು ಅವರು ಹೇಳಿದರು.



ರಾಜ್ಯ, ಅನುಸೂಚಿತ ಜಾತಿಗಳು/ ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್ತಿನ ದಿನಾಂಕ:26-05-2015ರ ಸಭೆಯಲ್ಲಿ ನೀಡಿದ ಅನುಮೋದನೆಯಂತೆ ಹಾಗೂ ಸರ್ಕಾರದ ಆದೇಶ ದಿನಾಂಕ:29-02-2016 ರಂತೆ ಕರ್ನಾಟಕದಲ್ಲಿ ವಾಸಿಸುತ್ತಿರುವ ಭೋವಿ ಜನಾಂಗದ ಜನರ ಅಭಿವೃದ್ಧಿಯನ್ನು ಗಮನದಲ್ಲಿರಿಸಿಕೊಂಡು ಕರ್ನಾಟಕ ಭೋವಿ ಅಭಿವೃದ್ಧಿ ನಿಗಮವನ್ನು ಕಂಪನಿ ಕಾಯ್ದೆ 2013 ರ ಸೆಕ್ಷನ್ 8 ರನ್ವಯ ನೋಂದಣಿ ಮಾಡಲಾಗಿದೆ. ಪರಿಶಿಷ್ಟ ಜಾತಿಯಲ್ಲಿ ಬರುವ 101 ಉಪ ಜಾತಿಗಳ ಇತ್ತೀಚಿನ ಅಧಿಸೂಚನೆ ಆಧಾರದ ಮೇಲೆ ಬೋವಿ ಜಾತಿಯು ಐತಿಹಾಸಿಕ ಹಿನ್ನೆಲೆ, ಸಾಂಸ್ಕೃತಿಕ ಒಡನಾಟ, ಸಾಂಪ್ರದಾಯಿಕ ಉದ್ಯೋಗ, ಪ್ರಾದೇಶಿಕ ಭಾಷೆಗಳು, ಹಬ್ಬಗಳ ಆಚರಣೆಗಳು, ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳನ್ನು ಆಧರಿಸಿ ಪರಿಶಿಷ್ಟ ಜಾತಿಯ 09 ಜಾತಿ/ಉಪಜಾತಿಗಳಾದ ಭೋವಿ, ಒಡ್, ಒಡ್ಡ, ಒಡ್ಡರ್, ವಡ್ಡರ, ಕಲ್ಲು ಒಡ್ಡರ, ಭೋವಿ (ನಾನ್ ಬೆಸ್ತ್) ಹಾಗೂ ಮಣ್ಣು ವಡ್ಡರ ಈ ಜಾತಿಗಳಿಗೆ ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಯೋಜನೆಗಳ ಸೌಲಭ್ಯವನ್ನು ಪಡೆಯಲು ಗುರುತಿಸಲಾಗಿದೆ.

ಸರ್ಕಾರದ ಆದೇಶದಂತೆ ಭೋವಿ ಜನಸಂಖ್ಯೆ ಹೆಚ್ಚಿರುವ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ವಿಜಯಪುರ, ಕಲಬುರಗಿ, ತುಮಕೂರು, ಬಳ್ಳಾರಿ, ಚಿತ್ರದುರ್ಗ, ರಾಯಚೂರು, ಧಾರವಾಡ, ಕೋಲಾರ, ಶಿವಮೊಗ್ಗ ಜಿಲ್ಲೆಗಳಲ್ಲಿ ಪ್ರತ್ಯೇಕ ಭೋವಿ ನಿಗಮದ ಜಿಲ್ಲಾ ಅಭಿವೃದ್ಧಿ ಅಧಿಕಾರಿಗಳ ಕಚೇರಿಯನ್ನು ತೆರೆಯಲು ಆದೇಶಿಸಲಾಗಿರುತ್ತದೆ. ಪ್ರಸ್ತುತ ಬೆಂಗಳೂರು ನಗರ, ಕೋಲಾರ, ಶಿವಮೊಗ್ಗ, ತುಮಕೂರು, ಚಿತ್ರದುರ್ಗ, ವಿಜಯಪುರ, ರಾಯಚೂರು ಜಿಲ್ಲೆಗಳಲ್ಲಿ ಪ್ರತ್ಯೇಕ ಜಿಲ್ಲಾ ಕಚೇರಿಯನ್ನು ತೆರೆದು ನಿಗಮದ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿರುತ್ತದೆ ಎಂದು ಅವರು ತಿಳಿಸಿದರು. ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಅವರು ಮತ್ತು ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ ಅವರು ನನಗೆ ನಿಗಮದ ರಾಜ್ಯಾಧ್ಯಕ್ಷನನ್ನಾಗಿ ನೇಮಿಸಿ ಮಹತ್ವದ ಜವಾಬ್ದಾರಿ ವಹಿಸಿದ್ದಾರೆ.

ಪ್ರತಿಯೊಂದು ಜಿಲ್ಲೆಗೆ ಭೇಟಿ ನೀಡಿ ನಿಗಮದ ಯೋಜನೆಗಳ ಬಗ್ಗೆ ಭೋವಿ ಸಮುದಾಯದ ಜನತೆಗೆ ತಿಳಿ ಹೇಳಲು ಹೇಳಿದ್ದರಿಂದ ಜನಜಾಗೃತಿಗಾಗಿ ತಾವು ಅಧ್ಯಕ್ಷರಾಗಿ ಜಿಲ್ಲಾವಾರು ಪ್ರವಾಸ ಕೈಗೊಂಡಿದ್ದು, ಪ್ರಥಮ ಬಾರಿಗೆ ರಾಯಚೂರು ಜಿಲ್ಲೆಗೆ ಆಗಮಿಸಿದ್ದಾಗಿ ಅವರು ಹೇಳಿದರು. ರಾಯಚೂರು, ಕಲಬುರಗಿ, ಬೀದರ, ಯಾದಗಿರಿ, ವಿಜಯಪುರ, ಬಾಗಲಕೋಟೆ ಭಾಗದಿಂದ ಜನತೆ ಬೆಂಗಳೂರಿಗೆ ಅಲೆಯುವುದು ಬೇಡ, ನಾನೇ ಅವರಿದ್ದಲ್ಲಿಗೆ ಹೋಗಬೇಕು ಎಂದು ತಿಳಿದು ತಾವು ಪ್ರವಾಸ ಕೈಗೊಂಡಿದ್ದಾಗಿ ಅವರು ಹೇಳಿದರು.

ಯಾವುದೇ ಕಾರಣಕ್ಕೂ ಮಕ್ಕಳಿಗೆ ಶಿಕ್ಷಣ ಕೊಡಿಸುವದನ್ನು ತಪ್ಪಿಸುವ ಕೆಲಸ ಮಾಡಬೇಡಿ ಎಂದು ಪ್ರವಾಸ ಕೈಗೊಂಡ ಸಂದರ್ಭದಲ್ಲಿ ಭೋವಿ ಸಮಾಜದ ಮುಖಂಡರಿಗೆ ತಿಳಿಸುತ್ತಿದ್ದೇನೆ. ಶಿಕ್ಷಣದ ಮಹತ್ವವನ್ನು ಅವರಿಗೆ ಮನವರಿಕೆ ಮಾಡುತ್ತಿದ್ದೇನೆ. ಸರ್ಕಾರ ಶಿಕ್ಷಣಕ್ಕಾಗಿ ಸಾಕಷ್ಟು ಸಂಖ್ಯೆಯಲ್ಲಿ ವಸತಿ ಸೌಕರ್ಯ ಕಲ್ಪಿಸಿದೆ ಎಂದು ಸಮಾಜದ ಜನರಿಗೆ ತಿಳಿಸುತ್ತಿದ್ದೇವೆ ಎಂದು ಅವರು ಹೇಳಿದರು. ಪತ್ರಿಕಾಗೋಷ್ಠಿಯಲ್ಲಿ ಸಮುದಾಯದ ಮುಖಂಡರಾದ ನಾರಾಯಣಸ್ವಾಮಿ, ಯಲ್ಲಪ್ಪ, ನರಸಪ್ಪ, ಶಶಿಕಲಾ ಭೀಮರಾಯ, ಯಲ್ಲಪ್ಪ, ಲಕ್ಷ್ಮಣ, ಆಂಜನೇಯ ಗಾಣಧಾಳ, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ರವಿ, ಸೇರಿದಂತೆ ಇತರರು ಇದ್ದರು.

# ತಹಸಿಲ್ದಾರ್ ಡಾ.ವಿನಯಾ ಹೂಗಾರಗೆ ಗೌರವ ಸಮರ್ಪಣೆ



ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಪಟ್ಟಣದ ಶ್ರೀ ಸಂಗಮೇಶ್ವರ ಸಭಾ ಭವನದಲ್ಲಿ ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹ ಶಿಕ್ಷಕರ ಸಂಘ ತಾಳಿಕೋಟಿ ತಾಲೂಕ ಘಟಕದ ಸಹಯೋಗದಲ್ಲಿ ಹಮ್ಮಿಕೊಂಡ 2025-26 ನೇ ಸಾಲಿನ ಎಸ್ ಎಸ್ ಎಲ್ ಸಿ ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶ ಸುಧಾರಣೆಗಾಗಿ ಉಪನ್ಯಾಸ, ರಸಪ್ರಶ್ನೆ ಹಾಗೂ ವಯೋನಿವೃತ್ತಿ ಹೊಂದಿದ ಪ್ರೌಢಶಾಲಾ ಶಿಕ್ಷಕರ ಸನ್ಮಾನ ಸಮಾರಂಭದಲ್ಲಿ ತಹಸಿಲ್ದಾರ್ ಡಾ. ವಿನಯಾ ಹೂಗಾರ್ ಇವರನ್ನು ಗೌರವಿಸಿ ಸನ್ಮಾನಿಸಲಾಯಿತು.**

ಖ್ಯಾತ ನೇತ್ರ ತಜ್ಞ ಡಾ.ಪ್ರಭುಗೌಡ ಲಿಂಗದಳ್ಳಿ, ಬಿಇಓ ಬಿ.ಎಸ್.ಸಾವಳಗಿ, ಉಪನ್ಯಾಸಕ ಮುಜಾವರ, ಸಂಘದ ಜಿಲ್ಲಾ ಅಧ್ಯಕ್ಷ ಶಿವರಾಜ ಬಿರಾದಾರ, ತಾಲೂಕ ಅಧ್ಯಕ್ಷ ವೈ ಬಿ ಬಡಿಗೇರ, ಎಸ್-ಎಸ್ ವಿದ್ಯಾ ಸಂಸ್ಥೆ ಅಧ್ಯಕ್ಷ ಎಚ್ ಎಸ್ ಪಾಟೀಲ, ಇಸಿಓ ಆರ್.ಬಿ.ದಮ್ಮೂರಮಠ, ಶಿಕ್ಷಕಿ ಸುವರ್ಣಾ ಗದುಗಿನಮಠ,ಉದ್ಯಮಿ ಪರಶುರಾಮ ಹಂಚಾಟೆ, ಡಾ.ಅನೀಲಕುಮಾರ ಇರಾಜ,ಬಿ.ಐ.ಹಿರೇಹೊಳಿ,ಸಚೀನ ಹಂಚಾಟೆ, ಎನ್.ಬಿ. ಪಿಂಜಾರ,ಕ.ರಾ.ಸ.ನೌ.ಸಂ. ತಾಲೂಕಾಧ್ಯಕ್ಷ ಎಸ್.ಬಿ.ಚೌದ್ರಿ,ನೋಡಲ್ ಅಧಿಕಾರಿ ಎಂ.ಕೆ.ಬಾಗವಾನ, ಶಿಕ್ಷಕಿ ಆರ್.ಜಿ. ದೇಸಾಯಿ, ಒಡೆಯರ್,ಸಹ ಶಿಕ್ಷಕ ಅರ್ಜುನ ಮಲ್ಲೇವಾಡಿ, ಸಂತೋಷ ಕದಂ, ಬಾಪುಗೌಡ ಪಾಟೀಲ, ಸಿಆರ್‌ಪಿ ರಾಜು ವಿಜಾಪುರ, ಪ್ರೌಢಶಾಲಾ ಶಿಕ್ಷಕರ ಸಂಘ ತಾಲೂಕ ಘಟಕದ ಪದಾಧಿಕಾರಿ,ನಾಮ ನಿರ್ದೇಶಿತ ಪದಾಧಿಕಾರಿಗಳು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಇದ್ದರು.

# ಆರೋಗ್ಯ ಇಲಾಖೆಯಿಂದ ವಿವಿಧ ಹುದ್ದೆಗಳಿಗೆ ಅರ್ಜಿ ಆಹ್ವಾನ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಇಲ್ಲಿನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ರಾಷ್ಟ್ರೀಯ ನಗರ ಆರೋಗ್ಯ ಅಭಿಯಾನದಡಿ ಮತ್ತು ಪಿ.ಎಂ ಅಭೀಮ್ ಯೋಜನೆಯಡಿಯಲ್ಲಿ 2025-26 ನೇ ಸಾಲಿಗೆ ಖಾಲಿ ಇರುವ ವಿವಿಧ ಹುದ್ದೆಗಳಿಗೆ ರಾಷ್ಟ್ರೀಯ ಆರೋಗ್ಯ ಅಭಿಯಾನದ ನಿಯಮಾನುಸಾರ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.**

Department of
Health & Family Welfare

ಹುದ್ದೆಗಳ ವಿವರ : ಪಿ.ಎಂ. ಅಭೀಮ್ ಅಡಿಯಲ್ಲಿ ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರು-18 ಹುದ್ದೆಗಳು, ಎನ್.ಯು. ಹೆಚ್.ಎಂ. ಕಾರ್ಯಕ್ರಮದಡಿ ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರು-01 ಹುದ್ದೆ ಹಾಗೂ ಎನ್.ಯು.ಹೆಚ್.ಎಂ. ಕಾರ್ಯಕ್ರಮದಡಿ ಆರೋಗ್ಯ ನಿರೀಕ್ಷಣಾಧಿಕಾಧಿಕಾರಿಗಳು-01 ಹುದ್ದೆಗೆ ಗುತ್ತಿಗೆ ಆಧಾರದ ನೇಮಕಾತಿಯನ್ನು ರಾಷ್ಟ್ರೀಯ ಆರೋಗ್ಯ ಅಭಿಯಾನದ ನಿಯಮಾನುಸಾರ, ರೋಷ್ಟರ್ ಕಮ್ ಮೇರಿಟ್ ಆಧಾರದ ಮೇಲೆ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗುವುದು, ಅರ್ಹ ವಿದ್ಯಾರ್ಹತೆಯುಳ್ಳ ಅಭ್ಯರ್ಥಿಗಳು ಮಾರ್ಚ್ 11ರೊಳಗಾಗಿ ವೆಬ್‌ಸೈಟ್: https://raichur.nic.in ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಕೊನೆಯ ದಿನಾಂಕದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅರ್ಜಿಗಳನ್ನು ಆನ್‌ಲೈನ್ ಹೊರತು ಪಡಿಸಿ ಇತರೆ ಯಾವುದೇ ಮೂಲಗಳಿಂದ ಸಲ್ಲಿಸುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಗುತ್ತಿಗೆ ಆಧಾರದ ನೇಮಕಾತಿಯು ಎನ್.ಹೆಚ್.ಎಂ. ನಿಯಮಾವಳಿಯ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಸದಸ್ಯ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಯೋಜನಾ ಅಭಿವೃದ್ಧಿ ಅಧಿಕಾರಿಗಳು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯ ರಾಯಚೂರು ಕಚೇರಿ ಅವಧಿಯಲ್ಲಿ ಮಾಹಿತಿ ಪಡೆಯಬಹುದು ಅಥವಾ ಮೊಬೈಲ್ ಸಂಖ್ಯೆ : 9449843121, 9844193931ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ಜಿಲ್ಲಾ ಯೋಜನಾ ಅಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭೋವಿ ಸಮುದಾಯದವರು ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು: ನಿಗಮದ ರಾಜ್ಯಾಧ್ಯಕ್ಷ ಎಂ ರಾಮಪ್ಪ ಸಲಹೆ

ನೈಜ್ಯ ದೆಸೆ ನ್ಯೂಸ್

**ರಾಯಚೂರುಳ: ಶಿಕ್ಷಣ ಪಡೆದಾಗ ಮಾತ್ರ ನಾವು ಆರ್ಥಿಕ, ಸಾಮಾಜಿಕ ಹಾಗೂ ರಾಜಕೀಯವಾಗಿ ಅಭಿವೃದ್ಧಿ ಹೊಂದಲು ಸಾಧ್ಯ. ಶಿಕ್ಷಣದಿಂದ ಮಾತ್ರ ಎಲ್ಲ ಸ್ಥಾನಮಾನಗಳು ಲಭ್ಯವಾಗಲಿದ್ದು, ಭೋವಿ ಸಮುದಾಯದ ಪ್ರತಿಯೊಬ್ಬರು ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕೆಂದು ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಂ.ರಾಮಪ್ಪ ಅವರು ಹೇಳಿದರು.**

ಫೆ.24ರ ಮಂಗಳವಾರ ದಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಮತ್ತು ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಭೋವಿ ನಿಗಮದ ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ಹಾಗೂ ಸಮುದಾಯದ ಮುಖಂಡರೊಂದಿಗೆ ಸಮಾಲೊಚನೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ತಿಳಿವಳಿಕೆ ಮತ್ತು ವಿಚಾರದಿಂದಲೇ ನನಗೆ ಜೀವನದಲ್ಲಿ ಎಲ್ಲ ಅವಕಾಶಗಳನ್ನು ಪಡೆಯಲು ಸಾಧ್ಯವಾಗಿದೆ. ಆ ತಿಳಿವಳಿಕೆಯು ಶಿಕ್ಷಣದಿಂದಲೇ ಬಂದಿದೆ. ಆದ್ದರಿಂದ ನಮ್ಮ ಬದಲಾವಣೆಗೆ ಶಿಕ್ಷಣವೊಂದೇ ದಾರಿಯಾಗಿದೆ.

ಈ ಭಾಗದಲ್ಲಿ ಶಿಕ್ಷಣದ ಪ್ರಮಾಣದ ಕಡಿಮೆ ಇದೆ. ಸಮಾಜದ ಮುಖಂಡರು ತಮ್ಮ ಮಕ್ಕಳಿಗೆ ಶಿಕ್ಷಣ ಕೊಡಿಸಲು ಹೆಚ್ಚಿನ ಕಾಳಜಿ ವಹಿಸಬೇಕು ಎಂದು ತಿಳಿಸಿದರು.



ನಾನು ಬಡತನದ ಕುಟುಂಬದಿಂದ ಬಂದಿದ್ದೇನೆ. ಬಡವ ಕಷ್ಟಗಳಿಗೆ ಯಾವ ರೀತಿಯಲ್ಲಿ ಸ್ಪಂದಿಸಬೇಕೆಂಬುದು ಗೊತ್ತಿದೆ. ಯಾರೇ ಆಗಲಿ ಯಾವುದೇ ವೇಳೆಯಲ್ಲಿ ಕರೆ ಮಾಡಿದರೂ ಸ್ವೀಕರಿಸಿ ಮಾತನಾಡುತ್ತೇನೆ. ಸಮಾಜದ ವಿದ್ಯಾರ್ಥಿಗಳಿಗೆ ಕಾಲೇಜು ಹಾಗೂ ವಸತಿ ಪ್ರವೇಶಕ್ಕಾಗಿ ಜನಸಾಮಾನ್ಯರು ಯಾವುದೇ ಸಮಯದಲ್ಲಿ ಸಹ ಸಂಪರ್ಕ ಮಾಡಬಹುದಾಗಿದೆ ಎಂದರು. ಉತ್ತರ ಕರ್ನಾಟಕದ ಜಿಲ್ಲೆಗಳಿಂದ ಭೋವಿ ಅಭಿವೃದ್ಧಿ ನಿಗಮದ ಮೇಲೆ ಹೆಚ್ಚಿನ ನಿರೀಕ್ಷೆ ಇದೆ. ನಾನು ಅವರಿಗೆ ಸುಳ್ಳು ಭರವಸೆಗಳನ್ನು ನೀಡುವುದಿಲ್ಲ.

ನನ್ನ ಕಡೆಯಿಂದ ಎಷ್ಟು ಸಾಧ್ಯವೋ ಅಷ್ಟು ಕೆಲಸಗಳನ್ನು ಅರ್ಹರಿಗೆ ತಲುಪಿಸಲು ಶ್ರಮಿಸುತ್ತೇನೆ ಎಂದರು. ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಭೋವಿ ಅಭಿವೃದ್ಧಿ ನಿಗಮಕ್ಕೆ ಅನೇಕ ಕಾರ್ಯಕ್ರಮಗಳನ್ನು ನೀಡಿದ್ದಾರೆ. ಅವುಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲಾಗಿದ್ದು, ಕಟ್ಟಕಡೆಯ ವ್ಯಕ್ತಿಗೂ ಕಾರ್ಯಕ್ರಮದ ಲಾಭವನ್ನು ತಲುಪಿಸಲಾಗುತ್ತದೆ ಎಂದರು.

ಅಧಿಕಾರಿಗಳಿಗೆ ಸೂಚನೆ: ಸಮಾರಂಭದಲ್ಲಿ ಪ್ರಾತ್ಯಕ್ಷಿಕೆ ಮೂಲಕ ಭೋವಿ ನಿಗಮದ ಸಮಗ್ರ ಯೋಜನೆಗಳ ಬಗ್ಗೆ ಸವಿಸ್ತರವಾಗಿ ತಿಳಿಸಲಾಯಿತು. ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಚಂದ್ರ ನಾಯ್ಕ್ ಯು ಅವರು ಆಯಾ ಯೋಜನೆಗಳ ಬಗ್ಗೆ ಸಮಾರಂಭದಲ್ಲಿ ವಿವರಿಸಿದರು.

ಸಭೆಯಲ್ಲಿ ಚರ್ಚೆಯಾಗುವ ಎಲ್ಲ ವಿಷಯಗಳನ್ನು ಕಡ್ಡಾಯವಾಗಿ ಸಂಬಂಧಿಸಿದ ಅಧಿಕಾರಿಗಳು ಗುರುತಿಸಿ, ಸಂಬಂಧಿಸಿದ ಫಲಾನುಭವಿಗಳೊಂದಿಗೆ ಚರ್ಚಿಸಿ ಸೌಲಭ್ಯ ದೊರಕಿಸಬೇಕು ಎಂದು ಇದೆ ವೇಳೆ ಅಧ್ಯಕ್ಷರು ಬೇರೆ ಬೇರೆ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮುಖಂಡರೊಂದಿಗೆ ಸಂವಾದ: ಪ್ರಗತಿ ಪರಿಶೀಲನಾ ಸಭೆಯ ಬಳಿಕ ಸಮುದಾಯದ ಮುಖಂಡರೊಂದಿಗೆ ಅಧ್ಯಕ್ಷರು ಸಂವಾದ ನಡೆಸಿದರು. ತಾಂತ್ರಿಕ ಶಿಕ್ಷಣ



ಮುಗಿಸಿದ ಸಮಾಜದ ನಿರುದ್ಯೋಗಿಗಳಿಗೆ ಆರ್ಥಿಕ ಸಹಾಯ ಮಾಡಬೇಕು. ಉನ್ನತ ಶಿಕ್ಷಣಕ್ಕೆ ಪ್ರೋತ್ಸಾಹ ನೀಡಬೇಕೆಂದು ಸಭೆಯಲ್ಲಿ ಮೊದಲಿಗೆ ಸಿಂಧನೂರಿನ ಮಲ್ಲೇಶ ಅವರು ಮನವಿ ಮಾಡಿದರು.

ನಿಗಮದಿಂದ ವಸತಿ ನಿಯಮವನ್ನು ಪ್ರಾರಂಭಿಸಲು ಅಗತ್ಯ ಕ್ರಮಕೈಗೊಳ್ಳಬೇಕೆಂದು ಮಲ್ಲೇಶ ರಾಯಚೂರು ಅವರು ಒತ್ತಾಯಿಸಿದರು. ನಿಗಮದಿಂದ ಭೂ ಒಡೆತನ ಯೋಜನೆಯಡಿ ಜಮೀನು ಮಂಜೂರಾಗಿದ್ದು, ಜಮೀನಿನ ಮೂಲ ಮಾಲೀಕರು ತಕಾರರು ಹಾಕಿದ್ದು, ಸಮಸ್ಯೆ ಬಗೆಹರಿಸಬೇಕು. ಭೂ ಒಡೆತನ ಯೋಜನೆಯಡಿ ಮಧ್ಯವರ್ತಿಗಳ ಹಾವಳಿಗೆ ಕಡಿವಾಣ ಹಾಡಬೇಕೆಂದು ಹನುಮಂತ ದೇವದುರ್ಗ ಅವರು ಮನವಿ ಮಾಡಿದರು. ಭೋವಿ ಅಭಿವೃದ್ಧಿ ನಿಗಮದಿಂದ ಸಮಾಜದ ಫಲಾನುಭವಿಗಳಿಗೆ ಹೆಚ್ಚಿನ ಮಟ್ಟದಲ್ಲಿ ಸೌಲಭ್ಯಗಳನ್ನು ನೀಡಬೇಕು. ನಿಗಮದ ಕಾರ್ಯಕ್ರಮಗಳ ಬಗ್ಗೆ ಜಾಗೃತಿ ಮಾಡಿಸಬೇಕೆಂದು ವೆಂಕಟೇಶ ಸಿಂಧನೂರು ಅವರು ತಿಳಿಸಿದರು. ಸಾಲ ಸೌಲಭ್ಯ ವಿತರಣೆ ವೇಳೆಯಲ್ಲಿ ಬ್ಯಾಂಕ್ ಅಧಿಕಾರಿಗಳು ಜನರಿಗೆ ಸರಿಯಾದ ರೀತಿಯಲ್ಲಿ ಸ್ಪಂದಿಸುವದಿಲ್ಲ.

ಕೂಡಲೇ ಬ್ಯಾಂಕುಗಳ ಅಧಿಕಾರಿಗಳ ಸಭೆ ಕರೆದು ಸೂಕ್ತ ನಿರ್ದೇಶನ ನೀಡಬೇಕು. ಅಲ್ಲದೆ ಭೋವಿ ಸಮಾಜದ ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ವಿತರಣೆಗೆ ಅಗತ್ಯ ಕ್ರಮ ವಹಿಸಬೇಕೆಂದು ರಾಯಚೂರಿನ ಶಶಿಕಲಾ ಭೀಮರಾಯ ಅವರು ಅಧ್ಯಕ್ಷರ ಗಮನಕ್ಕೆ ತಂದರು.

ಹಕ್ಕು ಪತ್ರ ವಿತರಣೆ: ನಿಗಮದ ಪ್ರತಿಷ್ಠಿತ ಯೋಜನೆಯಾದ ಭೂ ಒಡೆತನ ಯೋಜನೆಯಡಿ ಸರಸ್ವತಿ ರಮೇಶ, ನಿಂಗಮ್ಮ, ಶೈಲಜಾ, ತಾಯಮ್ಮ, ಉಷಾ, ರೇಣುಕಮ್ಮ ಅವರಿಗೆ ಹಕ್ಕು ಪತ್ರಗಳನ್ನು ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಂ.ರಾಮಪ್ಪ ಅವರು ವಿತರಣೆ ಮಾಡಿದರು. ಸಭೆಗೂ ಮುನ್ನ ಸಂವಿಧಾನದ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಹಾಗೂ ಶ್ರೀ ಶಿವಯೋಗಿ ಸಿದ್ಧರಾಮೇಶ್ವರ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಲಾಯಿತು.

ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ, ರಾಯಚೂರು ಮಹಾನಗರ ಪಾಲಿಕೆಯ ಕಂದಾಯ ವಿಭಾಗದ ಉಪ ಆಯುಕ್ತರಾದ ಸಂತೋಷ ರಾಣಿ, ಅದಿಜಾಂಬವ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ರಾಜೇಂದ್ರ ಜಲ್ದಾರ್, ಸಮಾಜದ ಮುಖಂಡರಾದ ಯಲ್ಲಪ್ಪ, ನಾರಾಯಣ ಸ್ವಾಮಿ, ಚಿತ್ರದುರ್ಗ ಭೋವಿ ಸಮಾಜದ ಜಿಲ್ಲಾಧ್ಯಕ್ಷರಾದ ತಿಪ್ಪೇಸ್ವಾಮಿ, ಶಶಿಕಲಾ ಭೀಮರಾಯ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು. ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಸಹ ಕಾರ್ಯದರ್ಶಿಗಳಾದ ದಂಡಪ್ಪ ಬಿರಾದಾರ್ ಅವರು ಕಾರ್ಯಕ್ರಮದ ನಿರೂಪಣೆ ಮಾಡಿದರು.